# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 271 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 18–05–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 271 | Title- Code: KARKAN 28269 | Chitradurga | Date: 18-05-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಪರಿಷತ್ ಚುನಾವಣೆ ಪ್ರಚಾರ ಮುದ್ರಣಕ್ಕೆ ಅನುಮತಿ ಕಡ್ಡಾಯ: ಎಡಿಸಿ 2
ಮೂಲ ಸೌಲಭ್ಯ ಕೊರತೆಯಾಗದಂತೆ ಎಚ್ಚರಿಕೆವಹಿಸಿ: ಉಪವಿಭಾಗಾಧಿಕಾರಿ 3
ತೊಗಲುಗೊಂಬೆ ಆಟ ಜಾನಪದ ಕಲೆಯ ಮೌಲ್ಯ ಸಂರಕ್ಷಿಸಿದೆ 4



ಸುದ್ದಿ, ಜಾಹಿರಾತಿಗೆ
9686622252


# ಪರಿಷತ್ ಚುನಾವಣೆ ಕಾಂಗ್ರೆಸ್‌ಗೆ ಗೆಲುವು

» ಚಿತ್ರದುರ್ಗ

ವಿಧಾನ ಪರಿಷತ್‌ನಲ್ಲಿ ಕಾಂಗ್ರೆಸ್ ಸದಸ್ಯ ಬಲ ಇಲ್ಲದಿರುವುದರಿಂದ ವಿಧಾನಸಭೆಯಿಂದ ಕಳುಹಿಸಿದ ಎಲ್ಲಾ ಮಸೂದೆಗಳು ವಾಪಾಸ್ಸಾಗುತ್ತಿವೆ. ಈ ಹಿನ್ನಲೆಯಲ್ಲಿ ಪರಿಷತ್‌ನಲ್ಲಿ ನಮ್ಮ ಬಲ ಹೆಚ್ಚಾಗಬೇಕಾದರೆ ಈ ಚುನಾವಣೆಯನ್ನು ನಾವು ಗೆಲ್ಲಲೇಬೇಕು ಎಂದು ಎಐಸಿಸಿಯ ಕಾರ್ಯದರ್ಶಿಮಯೂರ್‌ಜಯಕುಮಾರ್ ಕರೆ ನೀಡಿದರು.

ನಗರದ ಡಿಸಿಸಿ ಕಚೇರಿಯಲ್ಲಿ ಶುಕ್ರವಾರ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ಅಂಗವಾಗಿ ಆಯೋಜಿಸಿದ್ದ ಪೂರ್ವಬಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಮುಖಂಡರು, ಕಾರ್ಯಕರ್ತರು ಚುನಾಯಿತ ಪ್ರತಿನಿಧಿಗಳು ಒಟ್ಟಾಗಿ ಕೆಲಸ ಮಾಡಬೇಕಿದೆ ಎಂದರು.

ಈ ಹಿಂದೆ ಕಾಂಗ್ರೆಸ್ ಪಕ್ಷ ಪರಿಷತ್ ಚುನಾವಣೆಯನ್ನು ಅಷ್ಟಾಗಿ ಗಂಭೀರವಾಗಿ ಪರಿಗಣಿಸಿರಲಿಲ್ಲ. ಆದರೆ ಈ ಬಾರಿ ಮಾತ್ರ ಈ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿದೆ. ಆರು ಕ್ಷೇತ್ರಗಳಲ್ಲಿ ಶತಾಯಗತಾಯ ಗೆಲುವು ಸಾಧಿಸಬೇಕು. ಇದಕ್ಕಾಗಿ ಪಕ್ಷದ ಮುಖಂಡರು, ಕಾರ್ಯಕರ್ತರು ಪ್ರತಿಯೊಬ್ಬ ಮತದಾರರನ್ನು ಭೇಟಿ ಮಾಡುವುದರ ಮೂಲಕ ಮತಯಾಚನೆ ಮಾಡಬೇಕಿದೆ ಎಂದು ತಿಳಿಸಿದರು.

ವಿಧಾನಸಭೆಯ ಚುನಾವಣೆ ತದ ನಂತರ ಲೋಕಸಭಾಚುನಾವಣೆನಿರ್ವಹಿಸಲಾಗಿದೆ. ಈಗ ಪರಿಷತ್ ಚುನಾವಣೆ ಬಂದಿದೆ. ವಿಧಾನಸಭೆಯಲ್ಲಿ ಮತದಾರರು ನಮ್ಮ ಪಕ್ಷವನ್ನು ಕೈ ಹಿಡಿದಿದ್ದಾರೆ. ಅದೇ ರೀತಿ ಈ ಚುನಾವಣೆಯಲ್ಲಿಯೂ ಸಹಾ ಮತದಾರರಿಂದ ನಮ್ಮ ಪಕ್ಷದ ಅಭ್ಯರ್ಥಿಗೆ ಮತವನ್ನು ಹಾಕಿಸಬೇಕಿದೆ. ಸಾಧ್ಯವಾದಷ್ಟು ಪ್ರಥಮ ಪ್ರಾಶಸ್ತ್ಯದ ಮತವನ್ನು ನೀಡುವಂತೆ ಮನವಿ ಮಾಡಬೇಕಿದೆ ಎಂದರು.




ಪರಿಷತ್ ನಲ್ಲಿ ನಮ್ಮ ಪಕ್ಷದ ಸಂಖ್ಯೆ ಕಡಿಮೆ ಇದರಿಂದ ವಿಧಾನಸಭೆಯಲ್ಲಿ ಅಂಗೀಕರಿಸಿದ ಮಸೂದೆಗಳಿಗೆ ಪರಿಷತ್ ಅಂಗೀಕಾರ ನೀಡಬೇಕಿದೆ. ಈಗ ಪರಿಷತ್ ನಲ್ಲಿ ಸಂಖ್ಯೆ ಇಲ್ಲದಿರುವುದರಿಂದ ಹಲವಾರು ಉಪಯುಕ್ತ ಮಸೂದೆಗಳು ವಾಪಾಸ್ಸಾಗುತ್ತಿವೆ. ಇದರಿಂದ ಅಭಿವೃದ್ಧಿ ಕುಂಠಿತವಾಗುತ್ತಿದೆ. ಈ ಹಿನ್ನಲೆಯಲ್ಲಿ ಈ ಚುನಾವಣೆಯಲ್ಲಿ ನಮ್ಮ ಪಕ್ಷ ಗೆಲುವು ಸಾಧಿಸಿದರೆ ಪರಿಷತ್‌ನಲ್ಲಿ ನಮ್ಮ ಬಲ ಹೆಚ್ಚಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮಾತನಾಡಿ, ಪಕ್ಷದ ಮುಖಂಡರು ಅವರ ಗ್ರಾಮದಲ್ಲಿನ ಮತದಾರರನ್ನು ಕಂಡು ಮನವಿ ಮಾಡುವುದರ ಮೂಲಕ ನಮ್ಮ ಪಕ್ಷದ ಅಭ್ಯರ್ಥಿಗೆ ಮತವನ್ನು ಹಾಕಿಸಬೇಕಿದೆ. ಇದರೊಂದಿಗೆ ಮೊದಲನೇ ಸ್ಥಾನವನ್ನು ನೀಡುವಂತೆ ಕೇಳಬೇಕಿದೆ. ತಾಲ್ಲೂಕುವಾರು ಸಭೆಯನ್ನು ಕರೆಯುವುದರ ಮೂಲಕ ಮತದಾರರಿಗೆ ಮನವರಿಕೆಯನ್ನು ಮಾಡಬೇಕಿದೆ. ಈ ಚುನಾವಣೆಯ ಗೆಲುವಿನಿಂದ ಪರಿಷತ್‌ನಲ್ಲಿ ನಮ್ಮ ಪಕ್ಷದ ಬಲವನ್ನು ಹೆಚ್ಚಿಸಬೇಕಿದೆ. ಈ ಸ್ಪರ್ಧೆ ಮಾಡಿರುವ ಆರು ಕ್ಷೇತ್ರಗಳಲ್ಲಿಯೂ ಸಹಾ ಗೆಲುವನ್ನು ಸಾಧಿಸಬೇಕಿದೆ ಎಂದರು.

ಮಾಜಿ ಸಚಿವ ಹೆಚ್.ಅಂಜನೇಯ ಮಾತನಾಡಿ, ಶಿಕ್ಷಕರು ಇದಕ್ಕೆ ಮತದಾರರಾಗಿದ್ದಾರೆ. ತಾಲ್ಲೂಕು ಮಟ್ಟದಲ್ಲಿ ಸಭೆಯನ್ನು ನಡೆಸುವುದರ ಮೂಲಕ 10 ಜನ ಮತದಾರರಿಗೆ ಒಬ್ಬರಂತೆ ನೇಮಕ ಮಾಡಿ ಅವರನ್ನು ಭೇಟಿ ಮಾಡಿ ಮನವೊಲಿಸಿ ನಮ್ಮ ಪಕ್ಷಕ್ಕೆ ಮತ ಹಾಕುವಂತೆ ಮನವಿ ಮಾಡಬೇಕಿದೆ. ಈಗಾಗಲೇ ರಾಜ್ಯದಲ್ಲಿನ ನಮ್ಮ ಸರ್ಕಾರ ವಿವಿಧ ರೀತೀಯ ಸೌಲಭ್ಯಗಳನ್ನು ನೀಡಿದೆ ಮುಂದಿನ ದಿನದಲ್ಲಿ ಇನ್ನೂ ಹಲವಾರು ಸೌಲಭ್ಯಗಳನ್ನು ನೀಡಲಿದೆ. ಇದರ ಬಗ್ಗೆ ಅವರಿಗೆ ಅರಿವು ಮೂಡಿಸಬೇಕಿದೆ, ಪರಿಷತ್‌ನಲ್ಲಿ ನಮ್ಮ ಬಲ ಕಡಿಮೆ ಇದೆ. ಇದರಲ್ಲಿ ಗೆಲುವುದರ ಮೂಲಕ ನಮ್ಮ ಬಲವನ್ನು ಹೆಚ್ಚಿಸಬೇಕಿದೆ ಎಂದು ತಿಳಿಸಿದರು.

ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಮಾತನಾಡಿ, ನಮಗೆ ನಮ್ಮ ಪಕ್ಷ ಮತ್ತು ಕಾರ್ಯಕರ್ತರು ಉತ್ತಮವಾದ ಪಡೆಯಾಗಿದ್ದಾರೆ. ನನ್ನ ಚುನಾವಣೆಯನ್ನು ಯಾವ ರೀತಿ ಉತ್ತಮವಾಗಿ ಮಾಡಲಾಗಿದ್ದೇಯೂ ಅದೇ ರೀತಿ ಈ ಚುನಾವಣೆಯನ್ನು ಎಲ್ಲರು ಸಹಕಾರದಿಂದ ಮಾಡಬೇಕಿದೆ ಎಂದರು.

ಆಗ್ನೇಯ ಶಿಕ್ಷಕರ ಕ್ಷೇತ್ರ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಮಾತನಾಡಿ, ನಮ್ಮ ಪಕ್ಷ ಶಿಕ್ಷಕರ ಪರವಾಗಿದೆ, ಅವರಿಗಾಗಿ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಜಾರಿ ಮಾಡಿದೆ. ಶಿಕ್ಷಕರ ಹಲವಾರು ಸಮಸ್ಯೆಗಳಿವೆ ಅದನ್ನು ಮುಂದಿನ ದಿನಮಾನದಲ್ಲಿ ಪರಿಹಾರ ಮಾಡಲಾಗುವುದು. ಈಗ ಸರ್ಕಾರ ಸರ್ಕಾರಿ ನೌಕರರಿಗೆ 7ನೇ ವೇತನವನ್ನು ನೀಡಲು ಮುಂದಾಗಿದೆ ಆದರೆ ನೀತಿ ಸಂಹಿತೆ ಇರುವುದರಿಂದ ತಡವಾಗಿದೆ ಇದು ಮುಗಿದ ನಂತರ ಸರ್ಕಾರ ಪ್ರಕಟ ಮಾಡಲಿದೆ. ಇದರೊಂದಿಗೆ ಶಿಕ್ಷಕರ ನೇಮಕಾತಿ ನಡೆಯಲಿದೆ. ಕಾಂಗ್ರೆಸ್ ಸರ್ಕಾರ ಶಿಕ್ಷಕರಿಗಾಗಿ ಇದೇ ಧೈರ್ಯದಿಂದ ಮತವನ್ನು ಕೇಳುವಂತೆ ಪಕ್ಷದ ಮುಖಂಡರು, ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಶಾಸಕ ರಘುಮೂರ್ತಿ, ಡಿಸಿಸಿ ಅಧ್ಯಕ್ಷ ತಾಜ್‌ಪೀರ್, ಮುರಳಿಧರ ಹಾಲಪ್ಪ, ಮಾಜಿ ಶಾಸಕಿ ಪೂರ್ಣಿಮ, ನೇರ್ಲಗುಂಟೆ ರಾಮಪ್ಪ, ಯೋಗೀಶ್ ಮಾತನಾಡಿದರು.

ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ, ಜಿ.ಎಸ್. ಮಂಜುನಾಥ್, ಎನ್.ಡಿ.ಕುಮಾರ್, ಬಿ.ಟಿ.ಜಗದೀಶ್, ಸಂಪತ್ ಕುಮಾರ್, ಮೈಲಾರಪ್ಪ, ಕುಮಾರಗೌಡ, ಲಕ್ಷ್ಮೀಕಾಂತ ಗೀತಾ ನಂದಿನಿ ಗೌಡ, ಉಲ್ಲಾಸ್, ಚೋಟು ಮುದಾಸಿರ್ ಪ್ರಕಾಶ್ ರಾಮನಾಯ್ಕ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಮೇ.17ರಿಂದ ಜಿಲ್ಲಾಸ್ಪತ್ರೆಯ ರಕ್ತ ಕೇಂದ್ರ ಸಾರ್ವಜನಿಕ ಸೇವೆಗೆ ಮುಕ್ತ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯ ರಕ್ತ ಕೇಂದ್ರವು ಇದೇ ಮೇ.17 ರಿಂದ ಸಾರ್ವಜನಿಕ ಸೇವೆಗೆ ಮುಕ್ತವಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೇ.19ರಂದು ಮೊರಾರ್ಜಿ ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆ

» ಚಿತ್ರದುರ್ಗ

ಜಿಲ್ಲೆಯಲ್ಲಿಕಾರ್ಯನಿರ್ವಹಿಸುತ್ತಿರುವಡಾ.ಎ.ಪಿ.ಜೆ ಅಬ್ದುಲ್ ಕಲಾಂ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 6ನೇ ತರಗತಿಗೆ ಪ್ರವೇಶಕ್ಕಾಗಿ ಮೇ.19ರಂದು ಬೆಳಿಗ್ಗೆ 11 ಗಂಟೆಗೆ ಪ್ರವೇಶ ಪರೀಕ್ಷೆ ಜರುಗಲಿದೆ. ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ವಸತಿ ಶಾಲೆಗಳ ಪ್ರಾಂಶುಪಾಲರಿಂದ ಪ್ರವೇಶ ಪತ್ರಗಳನ್ನು ಪಡೆದು ಪ್ರವೇಶ ಪರೀಕ್ಷೆಗೆ ಹಾಜರಾಗಲು ಸೂಚಿಸಿದೆ. ಈ ಪರೀಕ್ಷೆಗೆ ಸಂಬಂಧಿಸಿದಂತೆ ಹಿರಿಯೂರು ತಾಲ್ಲೂಕು ದೇವರಕೊಟ್ಟ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಹಿರಿಯೂರು ನಗರದ ಕೆಎಸ್‌ಆರ್‌ಟಿಸಿ ಬಸ್ ಸ್ಟ್ಯಾಂಡ್ ಎದುರಿನ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜು, ಚಳ್ಳಕೆರೆಯ ಶಾಂತಿನಗರದ ಸೈನಿಕ ಆಸ್ಪತ್ರೆ ಹತ್ತಿರದ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ, ಚಳ್ಳಕೆರೆ ನಗರದ ತಾಲ್ಲೂಕು ಆಡಳಿತ ಕಚೇರಿ ಪಕ್ಕದ ಹೆಗ್ಗೆರೆ ತಾಯಮ್ಮ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಹಾಗೂ ಚಿತ್ರದುರ್ಗ ನಗರದ ನಿರ್ಮಿತಿ ಕೇಂದ್ರದ ಬಳಿ ಇರುವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಅನ್ನು ಪರೀಕ್ಷಾ ಕೇಂದ್ರಗಳಾಗಿ ಹಂಚಿಕೆ ಮಾಡಲಾಗಿದೆ. ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಮಳೆ ವರದಿ: ರಾಂಪುರದಲ್ಲಿ 26.2 ಮಿ.ಮೀ ಮಳೆ

» ಚಿತ್ರದುರ್ಗ

ಗುರುವಾರ ಸುರಿದ ಮಳೆ ವಿವರದನ್ವಯ ಜಿಲ್ಲೆಯ ಮೊಳಕಾಲ್ಮೂರು ತಾಲ್ಲೂಕಿನ ರಾಂಪುರದಲ್ಲಿ 26.2 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯಲ್ಲಿ ಸುರಿದ ಅತ್ಯಧಿಕ ಪ್ರಮಾಣದ ಮಳೆಯಾಗಿದೆ. ಮೊಳಕಾಲ್ಮೂರು ತಾಲ್ಲೂಕಿನ ದೇವಸಮುದ್ರದಲ್ಲಿ 15.2 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 1.6ಮಿ.ಮೀ, ಇಕ್ಕನೂರಿನಲ್ಲಿ 15.4ಮಿ.ಮೀ, ಬಬ್ಬೂರಿನಲ್ಲಿ 3 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 0.8ಮಿ.ಮೀ ರಾಮಗಿರಿಯಲ್ಲಿ 6.4ಮಿ.ಮೀ, ಬಿ.ದುರ್ಗದಲ್ಲಿ 7.2 ಮಿ.ಮೀ, ಹೆಚ್.ಡಿ.ಪುರದಲ್ಲಿ 16.6 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಬಾಗೂರು 6.2 ಮಿ.ಮೀ, ಮಾಡದಕೆರೆ 3.2 ಮಿ.ಮೀ, ಶ್ರೀರಾಂಪುರದಲ್ಲಿ 4 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗ–2ರಲ್ಲಿ 1.6 ಮಿ.ಮೀ, ಭರಮಸಾಗರ 7.2 ಮಿ.ಮೀ, ಸಿರಿಗೆರೆ 2.2 ಮಿ.ಮೀ, ಐನಹಳ್ಳಿಯಲ್ಲಿ 14.8 ಮಿ.ಮೀ ಮಳೆಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

# ಕಾಂಗ್ರೆಸ್‌ಗೆ ಬರಲಿದ್ದಾರೆ ವಿಪಕ್ಷ ನಾಯಕರು

» ಚಿತ್ರದುರ್ಗ

ಕೇಂದ್ರ ಸರ್ಕಾರ ಪೆನ್‌ಡ್ರೈವ್ ಪ್ರಕರಣದಲ್ಲಿ ನಮಗೆ ಸಹಕಾರ ಕೊಡುತ್ತಿಲ್ಲ. ಡಿಪ್ಲೊಮ್ಯಾಟಿಕ್ ಪಾಸ್‌ಪೋರ್ಟ್ ಕೊಟ್ಟು ದೇಶ ಬಿಟ್ಟು ಕಳಿಸಿದೆ. ಈ ದೇಶದಲ್ಲಿ ಎಲ್ಲೇ ಇದ್ದರೂ ಹತ್ತು ನಿಮಿಷಕ್ಕೆ ಕರೆತರಬಹುದು. ಆದರೆ ಕೇಂದ್ರ ಸರ್ಕಾರ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡು ಸುಮ್ಮನೆ ಆಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪೆನ್‌ಡ್ರೈವ್ ಪ್ರಕರಣದಲ್ಲಿ ಎಸ್‌ಐಟಿ ಸರಿಯಾದ ತನಿಖೆ ಮಾಡುತ್ತಿಲ್ಲ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿ ಪರಮೇಶ್ವರ್ ಗೃಹ ಸಚಿವರು ದಕ್ಷವಾಗಿ ನಿಭಾಯಿಸುತ್ತಿದ್ದಾರೆ. ಎಸ್‌ಐಟಿ ಸ್ವತಂತ್ರ ತನಿಖಾ ತಂಡ ಆಗಿದ್ದು. ತನಿಖೆ ನಡೆಸುತ್ತಿದೆ. ಸಾವಿರಾರು ಜನ ಮಹಿಳೆಯರು ಅನ್ಯಾಯಕ್ಕೆ ಒಳಗಾಗಿದ್ದಾರೆ. ಕೇಂದ್ರ ಸರ್ಕಾರ ಕೂಡಲೇ ಸಿಬಿಐ ಹಾಗೂ ಇತರೆ ಸಂಸ್ಥೆಗಳ ಮೂಲಕ ಹುಡುಕಲಿ. ಕೂಡಲೇ ಪ್ರಜ್ವಲ್ ಪಾಸ್ ಪೋರ್ಟ್ ರದ್ದು ಮಾಡಲಿ ಎಂದು ಒತ್ತಾಯಿಸಿದ್ದಾರೆ.



ಚುನಾವಣೆ ಬಳಿಕ ಸರ್ಕಾರ ಪತನ ಆದರೆ ನಾವು ಜವಾಬ್ದಾರರಲ್ಲ ಎಂಬ ವಿಜಯೇಂದ್ರ ಹೇಳಿಕೆಗೆ ಪ್ರತಿಕ್ರಿಯಿಸಿ, ಚುನಾವಣೆ ಬಳಿಕ ಕಾಂಗ್ರೆಸ್‌ಗೆ ಜೆಡಿಎಸ್ ಬಿಜೆಪಿ ನಾಯಕರೇ ಬರುತ್ತಾರೆ.


ಪುಟ ↘ 2


# ಚೌಳೂರು ಶೇಂಗಾ ಹುಲ್ಲಿನ ಬಣವೆಗೆ ಆಕಸ್ಮಿಕ ಬೆಂಕಿ: 2 ಲಕ್ಷಕ್ಕೂ ಹೆಚ್ಚು ನಷ್ಟ



» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಚೌಳೂರು ಗ್ರಾಮದ ರೈತ ಪಿ.ಎಸ್.ಸುಧಾಕರ ತನ್ನ ಜಮೀನಿನಲ್ಲಿದ್ದ ಸುಮಾರು 2 ಲಕ್ಷ ಮೌಲ್ಯದ ಆರು ಶೇಂಗಾ ಹುಲ್ಲಿನ ಬಣವೆಗೆ ಯಾರೋ ದುರುದ್ದೇಶದಿಂದಲೇ ಬೆಂಕಿ ಹಚ್ಚಿ ನಾಶಪಡಿಸಿದ್ದು, ಆ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಪೊಲೀಸರಿಗೆ ದೂರು ನೀಡಿದ್ದಾನೆ. ದೂರಿನಲ್ಲಿ ಪಕ್ಕದ ಜಮೀನಿನವರೇ ಈ ಕೃತ್ಯ ಮಾಡಿರಬಹುದು ಎಂದು ಶಂಕೆ ವ್ಯಕ್ತಪಡಿಸಿ ದೂರು ನೀಡಿದ್ದಾನೆ. ಠಾಣಾಧಿಕಾರಿ ಚಂದ್ರಮೌಳಿ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

## ಪ್ರಮುಖ ಸುದ್ದಿ

# ನಾನು ಬಿಜೆಪಿಗೆ ದ್ರೋಹ ಮಾಡಿಲ್ಲ: ಪೂರ್ಣಿಮಾ

» ಚಿತ್ರದುರ್ಗ

ನಾನು ನನ್ನ ಶಾಸಕ ಸ್ಥಾನ ಅವಧಿ ಮುಗಿದ ಮೇಲೆ ಬೇರೆ ಪಕ್ಷಕ್ಕೆ ಹೋಗಿದ್ದೆನೆ ಆದರೆ ಬಿಜೆಪಿಯವರ ಇನ್ನು ಅಧಿಕಾರದಲ್ಲಿ ಅಧಿಕಾರ ಮಾಡಬೇಕೆಂದು 17 ಜನ ಶಾಸಕರನ್ನು ಕರೆದು ಕೊಂಡು ಹೋದರಲ್ಲಿ ಇದಕ್ಕೆ ಏನನ್ನ ಬೇಕು ಇದು ಪಕ್ಷ ದ್ರೋಹ ಅಲ್ಲವಾ ಎಂದು ಮಾಜಿ ಶಾಸಕಿ ಶ್ರೀಮತಿ ಪೂರ್ಣಿಮಾ ಶ್ರೀನಿವಾಸ್ ಆಗ್ನೇಯ ಶಿಕ್ಷಕರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ನಾರಾಯಣಸ್ವಾಮಿಗೆ ತಿರುಗೇಟು ನೀಡಿದ್ದಾರೆ.

ಚಿತ್ರದುರ್ಗ ನಗರದ ಕಾಂಗ್ರೆಸ್ ಕಚೇರಿಯಲ್ಲಿ ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿ, ಪರಿಷತ್ ಚುನಾವಣೆಯಲ್ಲಿ ಪಕ್ಷ ದ್ರೋಹ ಮಾಡಿದವರನ್ನು ಸೋಲಿಸಿ ಎಂಬ ನಾರಾಯಣಸ್ವಾಮಿಯ ಮಾತಿಗೆ ಪ್ರತಿಕ್ರಿಯಿಸಿದ ಅವರು, ನಾನು ಬಿಜೆಪಿ ಶಾಸಕರಾಗಿ ಐದು ವರ್ಷ ಪಕ್ಷ ನೀಡಿದ ಸೂಚನೆಯನ್ನು ಕಾಲಿನಲ್ಲಿ ತೋರಿಸಿದ್ದನ್ನು ತಲೆಯ ಮೇಲೆ ಹೊತ್ತುಕೊಂಡು ಮಾಡಿದ್ದಾನೆ ಈ ಸಮಯದಲ್ಲಿಯೇ ತನ್ನ ಪತಿಯವರಿಗೆ ಪರಿಷತ್ ಸ್ಥಾನದ ಟೀಕೇಟ್ ನೀಡಿ ಎಂದು ಸಹಾ ಕೇಳಿದ್ದೆ ಆದರೆ ಆಗ ಮಾತನಾಡದವರು ಈಗ ಬೇರೆ ಪಕ್ಷದಲ್ಲಿ ಇದ್ದಾರೆ ಎಂದು ಮಾತನಾಡುತ್ತಿದ್ದಾರೆ. ನನಗೆ ನನ್ನ ಕುಟುಂಬ ಸಂಸ್ಕಾರವನ್ನು ಕಲಿಸಿದ್ದಾರೆ ಅವರನ್ನು ಅಣ್ಣ ಎಂದೇ ಕರೆಯುತ್ತೇನೆ. ರಾಜಕೀಯ ನಿಂತ ನೀರಲ್ಲ ಕೆಲವೂ ಬದಲಾವಣೆಗಳು ಅನಿವಾರ್ಯತೆಯಾಗುತ್ತವೆ. ಹಾಗಾಗಿ ನಾನು ಬದಲಾವಣೆಯನ್ನು ಮಾಡಿದ್ದೇನೆ ಎಂದರು.




ಪಕ್ಷದಲ್ಲಿ ಇದ್ದು ಪಕ್ಷಕ್ಕೆ ದ್ರೋಹ ಮಾಡಿ ಮಧ್ಯದಲ್ಲಿ ಬಿಟ್ಟಿಲ್ಲ, ಶಾಸಕರಾಗಿ ಮತವನ್ನು ನೀಡಿದ ಹಿರಿಯೂರು ಮತದಾರರಿಗೆ ಪ್ರಮಾಣೀಕವಾಗಿ ಸೇವೆಯನ್ನು ಸಲ್ಲಿಸಿದ್ದೆನೆ, ಈ ಸಲ ಚುನಾವಣೆಯನ್ನು ನಾನಾ ಕಾರಣಗಳಿಂದ ಮತದಾರರನ್ನು ನನನ್ನು ಕೈಬಿಟ್ಟಿದ್ದಾರೆ. ಎರಡನೇ ಸ್ಥಾನವನ್ನು ನೀಡಿದ್ದಾರೆ. ಈ ಸಮಯದಲ್ಲಿ ನನ್ನ ಕುಟುಂಬ ಹಿತೈಷಿಗಳ ಅಭೀಪ್ರಾಯವನ್ನು ಪಡೆದು ಪಕ್ಷ ಬದಲಾವಣೆ ಮಾಡಿದ್ದೇನೆ, ಆದರೆ ಅಧಿಕಾರಕ್ಕಾಗಿ ಮಧ್ಯದಲ್ಲಿ ಪಕ್ಷವನ್ನು ಬಿಟ್ಟಿಲ್ಲ ಎಂದು ತಿರುಗೇಟು ನೀಡಿ, ಈ ಪಕ್ಷಕ್ಕೆ ಬಂದ ಮೇಲೆ ಶ್ರೀನಿವಾಸರವರನ್ನು ಈ ಚುನಾವಣೆಯಲ್ಲಿ ಅಭ್ಯರ್ಥಿಯನ್ನಾಗಿ ಮಾಡಿದ್ದಾರೆ. ನಿಮ್ಮ ಪಕ್ಷ ಹಿಂದುಳಿದ ವರ್ಗ, ಪರಿಶಿಷ್ಟ ಜಾತಿ ಮತ್ತು ವರ್ಗದವರಿಗೆ ಹೆಚ್ಚಿನ ಕಾಳಜಿ ಆದರೆ ನಮ್ಮ ಪತಿಯವರಿಗೆ ಟೀಕೇಟ್‌ಗಾಗಿ ಶೀಫಾರಸ್ಸು ಮಾಡಿಲ್ಲ ಬೇರೆಯವರಿಗೆ ಮಣೆ ಹಾಕಲಾಯಿತು ಎಂದು ಟೀಕಿಸಿದರು.

ಈ ಸಂದಬರ್ಭದಲ್ಲಿ ನನ್ನ ಪತಿಯವರು ಪಕ್ಷೇತರರಾಗಿ ಚುನಾವಣೆಯಲ್ಲಿ ಸ್ಪರ್ದೇ ಮಾಡಿದರು ಆಗ ನಾನು ಶಾಸಕಳಾಗಿದ್ದೆ ಆ ಸಮಯದಲ್ಲಿಯೂ ಸಹಾ ನಾನು ಪಕ್ಷಕ್ಕೆ ನಿಷ್ಠಯಾಗಿ ಪಕ್ಷದ ಅಭ್ಯರ್ಥಿ ಪರವಾಗಿ ಕೆಲಸವನ್ನು ಮಾಡಿದ್ದೇನೆ ಪ್ರಮಾಣಿಕಳಾಗಿ ಶಿರಾ ಉಪ ಚುನಾವಣೆಯಲ್ಲಿ ಕೆಲಸವನ್ನು ಮಾಡಿದ್ದೇನೆ ನನ್ನ ಬಗ್ಗೆ ನನ್ನ ಕುಟುಂಬದ ಬಗ್ಗೆ ಮಾತನಾಡುವಾಗ ಯೋಚನೆ ಮಾಡಿ ಮಾತನಾಡಬೇಕಿದೆ ಎಂದು ಪೂರ್ಣಿಮಾ ರವರು ಪಕ್ಷಕ್ಕೆ ದ್ರೋಹ ಮಾಡಿದ್ದಾರೆ ಎಂದು ಕೇಳಿ ಮತದಾರರಿಗೆ ಮತವನ್ನು ಕೇಳ ಬೇಡಿ ನಾನು ಮೂರು ಬಾರಿ ಆಯ್ಕೆಯಾಗಿದ್ದರೂ ಸಹಾ ಹೊಸ ಪೆನ್‌ಷನ್ ಸ್ಕೀಂ ರದ್ದು ಮಾಡಿ ಹಳೆಯದಾದ ಪೆನ್‌ಷನ್ ಸ್ಕಿಂನ್ನು ಜಾರಿ ಮಾಡುವಲ್ಲಿ ವಿಫಲನಾಗಿದ್ದೇನೆ, ನನ್ನ ಸರ್ಕಾರ ಇದ್ದರೂ ಸಹಾ ಅದು ಸಾಧ್ಯವಾಗಿಲ್ಲ ನಾನು ಮಾಡಕಾಗಿಲ್ಲ ಮತವನ್ನು ಕೊಡಿ ಎಂದು ಕೇಳಿ ಶಿಕ್ಷಕರಿಗೆ ಪ್ರಮೋಷನ್ ಆದರೆ ವೇತನದಲ್ಲಿ ವ್ಯತ್ಯಾಸ ಇದೆ ಅದನ್ನು ಬಗೆಹರಿಸಲು ಆಗಿಲ್ಲ ಮತವನ್ನು ಕೊಡಿ, ಅನುದಾನಿತ ಶಾಲೆಗಳಲ್ಲಿ 2005ರಲ್ಲಿ ಹೊಸ ನೇಮಕಾತಿ ಮಾಡಿಸಲು ಆಗಿಲ್ಲ ಎಂದು ಮತವನ್ನು ಕೇಳಿ ನಿಮ್ಮ ಸಮಸ್ಯೆಯನ್ನು ಈ ಮೂರು ಸಮಯದಲ್ಲಿ ಬಗೆ ಹರಿಸಲು ಆಗಿಲ್ಲ ಇದಕ್ಕೆ ಮತವನ್ನು ಕೊಡಿ ಎಂದು ಕೇಳಿ, ನಾರಾಯಣಸ್ವಾಮಿಯವರು ಶಿಕ್ಷಕರ ಗಂಭೀರವಾದ ಸಮಸ್ಯೆಗಳನ್ನು ಬಗೆಹರಿಸವಲ್ಲಿ ವಿಫಲರಾಗಿದ್ದಾರೆ. ಈಗ ನಾನು ಕಾಂಗ್ರೆಸ್ ಪಕ್ಷದಲ್ಲಿದ್ದೇನೆ ಇಲ್ಲಿ ನಾನು ನಿಷ್ಠಯಿಂದ ಇದ್ದೇನೆ ಇರುತ್ತೇನೆ ಎಂದರು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ಕಾಂಗ್ರೆಸ್‌ಗೆ ಬರಲಿದ್ದಾರೆ ವಿಪಕ್ಷ ನಾಯಕರು

» ಮೊದಲ ಪುಟದಿಂದ

ಎರಡು ಪಕ್ಷದಿಂದ 25 ರಿಂದ 30 ಜನ ನಮ್ಮ ಪಕ್ಷಕ್ಕೆ ಬರುತ್ತಾರೆ. ಕಾಂಗ್ರೆಸ್ ರಾಜ್ಯದಲ್ಲಿ ಮತ್ತಷ್ಟು ಬಲಿಷ್ಠ ಆಗುತ್ತೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂಬ ಬಿಜೆಪಿಯವರ ಆರೋಪಕ್ಕೆ ಪ್ರತಿಕ್ರಿಯಿಸಿ ಇಂದು ನಮ್ಮ ಸರ್ಕಾರದಲ್ಲಿ ಕಾನೂನು ಸುವ್ಯವಸ್ಥೆ ದಕ್ಷವಾಗಿದೆ. ಗೃಹ ಸಚಿವರಾಗಿ ಪರಮೇಶ್ವರ್ ರವರು ದಕ್ಷವಾಗಿ ನಿಭಾಯಿಸುತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯರವರು ಸಹ ಎಲ್ಲ ಗಮನಹರಿಸಿದ್ದಾರೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿಲ್ಲ, ಹದಗೆಡುವುದಿಲ್ಲ ಎಂದರು. ಹುಬ್ಬಳ್ಳಿಯಲ್ಲಿ ಅಂಜಲಿ ಕೊಲೆ ಪ್ರಕರಣದಲ್ಲಿ ಪೊಲೀಸರ ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂಬ ಆರೋಪಕ್ಕೆ ಪ್ರತಿಕ್ರಿಯಿಸಿ, ಈಗಾಗಲೇ ಸಿಎಂ, ಡಿಸಿಎಂ ಸಹ ಪ್ರತಿಕ್ರಿಯೆ ನೀಡಿದ್ದಾರೆ. ನಾನು ಈಗ ಮತ್ತೆ ಅದರ ಬಗ್ಗೆ ಪ್ರತಿಕ್ರಿಯೆ ನೀಡಲ್ಲ ಚಿತ್ರದುರ್ಗ ಜಿಲ್ಲಾಸ್ಪತ್ರೆಯಲ್ಲಿ ಅವ್ಯವಸ್ಥೆ ವಿಚಾರಕ್ಕೆ ಪ್ರತಿಕ್ರಿಯಿಸಿ ನಾನು ಸಹ ಮಾಧ್ಯಮಗಳಲ್ಲಿ ನೋಡಿದ್ದೇನೆ. ಡಿಹೆಚ್ಓ ಅವರ ಜೊತೆ ಫೋನ್ ಮೂಲಕ ಮಾತಾಡಿ ಸಮಸ್ಯೆಗೆ ಬಗ್ಗೆ ಕೇಳಿದ್ದೇನೆ. ಒಂದು ವಾರದಲ್ಲಿ ಎಲ್ಲಾ ಸರಿ ಮಾಡುವುದಾಗಿ ಹೇಳಿದ್ದಾರೆ. ನೀತಿ ಸಂಹಿತೆ ಇರುವುದರಿಂದ ನಾವು ಅತ್ತ ಗಮನ ಹರಿಸಿಲ್ಲ. ಚುನಾವಣೆ ಮುಗಿದ ತಕ್ಷಣ ಎಲ್ಲ ಸಮಸ್ಯೆಗೆ ಶಾಶ್ವತ ಪರಿಹಾರ ಕೊಡುತ್ತೇವೆ ಎಂದರು.

### ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿನ 6ನೇ ತರಗತಿಗೆ ದಾಖಲಾತಿಗೆ ಪರೀಕ್ಷೆ

» ದಾವಣಗೆರೆ

ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳು ಹಾಗೂ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಗಳಿಗೆ 2024–25ನೇ ಸಾಲಿನ 6ನೇ ತರಗತಿ ಪ್ರವೇಶಕ್ಕಾಗಿ ಪ್ರವೇಶ ಪರೀಕ್ಷೆಯನ್ನು ಮೇ.19 ರಂದು ನಡೆಸಲಾಗುವುದು. ವಿದ್ಯಾರ್ಥಿಗಳ ಪ್ರವೇಶ ಪತ್ರ (ಊಂಐಐ ಖಿUಅಏಇಖಿ) ವನ್ನು ಜಿಲ್ಲಾ ಅಧಿಕಾರಿಗಳ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ 44, ಜಿಲ್ಲಾಡಳಿತ ಭವನ, ಪಿ.ಬಿ ರಸ್ತೆ, ಕರೂರು ಕ್ರಾಸ್, ದಾವಣಗೆರೆ ಇಲ್ಲಿ ವಿತರಿಸಲಾಗುತ್ತಿದೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಯ 6ನೇ ತರಗತಿ ಪ್ರವೇಶಕ್ಕಾಗಿ ಸೇವಾಸಿಂಧು ಪೋರ್ಟ□□ನಲ್ಲಿ ಅರ್ಜಿ ಸಲ್ಲಿಸಿರುವ ಎಲ್ಲಾ ವಿದ್ಯಾರ್ಥಿಗಳು ಪ್ರವೇಶ ಪತ್ರ (ಊಂಐಐ ಖಿUಅಏಇಖಿ) ವನ್ನು ಪಡೆದುಕೊಳ್ಳುವಂತೆ ತಿಳಿಸಿದೆ. ಹಾಗೂ ಪ್ರವೇಶ ಪತ್ರ ಪಡೆಯಲು ಬರುವ ವಿದ್ಯಾರ್ಥಿ, ಪೋಷಕರು ವಿದ್ಯಾರ್ಥಿಯ ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರ, ಆಧಾರಕಾರ್ಡ್, ಅರ್ಜಿ ಸಲ್ಲಿಸಿರುವ ಪ್ರತಿಯನ್ನು ಕಡ್ಡಾಯವಾಗಿ ತರಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08192–250022 ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

66/11 ಕೆವಿ ಆವರಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರುಡುವ ಎಫ್13–ಆನೆಕೊಂಡ, ಎಫ್14–ಮಹಾವೀರ ಮಾರ್ಗಗಳವ್ಯಾಪ್ತಿಯಲ್ಲಿ ತುರ್ತು ನಿರ್ವಹಣಾ ಕಾಮಗಾರಿಗಳನ್ನು ನಿರ್ವಹಿಸಬೇಕಾಗಿರುವುದರಿಂದ ಮೇ.18 ರ ಶನಿವಾರದಂದು ಬೆಳಿಗ್ಗೆ 10:00 ರಿಂದ ಸಂಜೆ 4:00 ಗಂಟೆಯವರೆಗೆ ಎಫ್13–ಆನೆಕೊಂಡ ಫೀಡರ್: ಶೇಖರಪ್ಪ ನಗರ ಮಸೀದಿ ಹಿಂಭಾಗ, ರಂಭಾಪುರಿ ರಸ್ತೆ, ಮಹಾವೀರ ಭವನ, ಆರ್‌ಎಮ್‌ಸಿ ಲಿಂಕ್ ರಸ್ತೆ, ಗುಜರಿ ಲೈನ್, ಬಂಬೂಬಜಾರ್, ಬಿ.ಟಿ ಲೇಔಟ್, ಎಲ್‌ಬಿಎಸ್ ನಗರ, ಆನೆಕೊಂಡ, ಇಮಾಂನಗರ, ಬಿಡಿಓ ಆಪೀಸ್, ಎಫ್14–ಮಹಾವೀರ ಫೀಡರ್: ಟಿ.ಸಿ ಲೇಔಟ್, ಎಲ್‌ಐಸಿ ಆಫೀಸ್, ಕೆಆರ್ ರಸ್ತೆ, ಜಗಳೂರು ಬಸ್‌ಸ್ಟಾಪ್, ಅರಳೀಮರ ಸರ್ಕಲ್, ನೂರಾನಿ ಆಟೋಸ್ಟಾಂಡ್, ವೆಂಕಟೇಶ್ವರ ದೇವಸ್ಥಾನದ ಪಕ್ಕ, ಆನೆಕೊಂಡ ಹೊಸ ಲೇಔಟ್, ಉರ್ದು ಸ್ಕೂಲ್ ಹಿಂಭಾಗ, ಅಜಾದ್‌ನಗರ 10 ರಿಂದ 16ನೇ ಕ್ರಾಸ್‌ವರೆಗೆ, ಕೆಆರ್ ರಸ್ತೆ, ಜಗಳೂರು ಬಸ್‌ಸ್ಟಾಂಡ್ ಜಗಳೂರು ರಸ್ತೆ ಎಆರ್‌ಬಿ ಮಿಲ್, ಚಾಮರಾಜಪೇಟೆ, ವಾಟರ್ ಟ್ಯಾಂಕ್, ಎಸ್‌ಎಸ್ ಆಸ್ಪತ್ರೆ, ಅರಳೀಮರದ ಸರ್ಕಲ್, ಬೇತೂರ್ ರಸ್ತೆ, ಚರ್ಚ್ ರಸ್ತೆ, ಮುನ್ಸಿಪಲ್ ಕಾಲೇಜ್, ಕೊಹಿನೂರ್ ಹೋಟೆಲ್ ಹಿಂಭಾಗ, ಮಾಗನಹಳ್ಳಿ ರಸ್ತೆ, ಹಾಸಬಾವಿ ಸರ್ಕಲ್, ಮಿಲ್ಲತ್ ಸ್ಕೂಲ್ ಸುತ್ತಮುತ್ತ ಹಾಗೂ ಇತರೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ವಾಸವಿ ಜಯಂತಿ

» ದಾವಣಗೆರೆ

ನಗರದ ಎಸ್.ಕೆ.ಪಿ.ರಸ್ತೆಯಲ್ಲಿನ ಶ್ರೀಕನ್ನಿಕಾ ಪರಮೇಶ್ವರಿ ದೇವಸ್ಥಾನ (ರಿ.) ಪಬ್ಲಿಕ್ ರಿಲೀಜಿಯಸ್ ಟ್ರಸ್ಟ್‌ನಿಂದ ವಾಸವಿ ದೇವಿಯ ಜಯಂತಿ ಅಂಗವಾಗಿ ಮೇ 8ರಂದು ಶನಿವಾರ ಎಸ್.ಕೆ.ಪಿ. ರಸ್ತೆಯಲ್ಲಿನ ದೇವಸ್ಥಾನದಲ್ಲಿ ಆದಿ ಪರಾಶಕ್ತಿ ಶ್ರೀ ಕನ್ನಿಕಾ ಪರಮೇಶ್ವರಿ ದೇವಿಗೆ ವಿಶೇಷ ಅಲಂಕಾರ, ವಿಶೇಷ ಪೂಜೆಗಳೊಂದಿಗೆ ಮಧ್ಯಾಹ್ನ 12.30ಕ್ಕೆ ಮಹಾ ಮಂಗಳಾರತಿ ನಂತರ ಅನ್ನ ಸಂತರ್ಪಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಅಲ್ಲದೇ ಪ್ರತಿವರ್ಷದಂತೆ ದೇವಿಯ ಉತ್ಸವ ಮೂರ್ತಿಯ ಮೆರವಣಿಗೆ ಸಂಜೆ 6ರ ನಂತರ ನಗರದ ಪ್ರಮುಖ ಬೀದಿಗಳಲ್ಲಿ ನಡೆಯಲಿದೆ.

### ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಚುನಾವಣೆ ಪ್ರಚಾರ ಮುದ್ರಣಕ್ಕೆ ಅನುಮತಿ ಕಡ್ಡಾಯ

» ಚಿತ್ರದುರ್ಗ

ಪ್ರಜಾ ಪ್ರಾತಿನಿಧ್ಯ ಕಾಯಿದೆ, 1951ರ ಸೆಕ್ಷನ್ 127–ಂ ಅನ್ವಯ ಚುನಾವಣಾ ಕರಪತ್ರಗಳು ಮತ್ತು ಪೋಸ್ಟರ್‌ಗಳ ಮುದ್ರಣ ಮತ್ತು ಪ್ರಕಟಣೆಗೆ ಅನುಮತಿ ಕಡ್ಡಾಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.

ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ–2024ರ ಸಂಬಂಧ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ರಾಜಕೀಯ ಪಕ್ಷದ ಪ್ರತಿನಿಧಿಗಳು ಹಾಗೂ ಮುದ್ರಣಾಲಯಗಳ ಮಾಲೀಕರ ಸಭೆ ನಡೆಸಿ ಅವರು ಮಾತನಾಡಿದರು.



ಯಾವುದೇ ಮುದ್ರಿತ ಚುನಾವಣಾ ಕರಪತ್ರ, ಪ್ಲಕಾರ್ಡ್ ಅಥವಾ ಪೋಸ್ಟರ್, ಮಲ್ಟಿಗ್ರಾಫ್ ಮುಂಭಾಗದಲ್ಲಿ ಮುದ್ರಕರ ಹಾಗೂ ಪ್ರಕಾಶಕರ ಹೆಸರು ಮತ್ತು ವಿಳಾಸವನ್ನು ನಮೂದು ಮಾಡಬೇಕು. ಇದರ ಜೊತೆಗೆ ಮುದ್ರಿಸಿದ ಪ್ರತಿಗಳ ಸಂಖ್ಯೆ ಸಹ ನಮೂದಿಸಬೇಕು. ಚುನಾವಣಾ ಸಾಮಗ್ರಿಗಳನ್ನು ಬೆಂಗಳೂರಿನಲ್ಲಿ ಮುದ್ರಿಸಿದ್ದರೆ ಮುದ್ರಕನು ತನ್ನ ಘೋಷಣೆಯನ್ನು ಮುಖ್ಯ ಚುನಾವಣಾಧಿಕಾರಿಗಳು, ಮತ್ತು ಚುನಾವಣಾಧಿಕಾರಿಗೆ ಹಾಗೂ ಬೇರೆ ಜಿಲ್ಲೆಗಳಲ್ಲಿ ಮುದ್ರಿಸಿದ್ದರೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ಗೆ ಒಂದು ಪ್ರತಿಯನ್ನು ಕಳುಹಿಸಬೇಕು. ಜಿಲ್ಲೆಯಲ್ಲಿ ಮುದ್ರಿತ ವಸ್ತುಗಳ ನಾಲ್ಕು ಪ್ರತಿಗಳನ್ನು ಮುದ್ರಣದ ಹತ್ತು ದಿನಗಳೊಳಗೆ ಪ್ರಕಾಶಕರ ಘೋಷಣೆಗಳನ್ನು ತಪ್ಪದೇ ಜಿಲ್ಲಾಧಿಕಾರಿ ಕಚೇರಿಗೆ ತಲುಪಿಸಬೇಕು. ನಿಬಂಧನೆಗಳನ್ನು ಪಾಲಿಸದೇ ಇದ್ದರೆ ಕಾನೂನಿನ ಪ್ರಕಾರ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.



ಸಭೆಯಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಸಿಪಿಐ(ಎಂ) ಡಿಒಸಿ ಸಿ.ಕೆ.ಗೌಸ್‌ಪೀರ್, ಸಿಪಿಐ ಜಿಲ್ಲಾ ಕಾರ್ಯದರ್ಶಿ ಜಿ.ಸಿ.ಸುರೇಶ್‌ಬಾಬು, ಸತ್ಯಕೀರ್ತಿ, ಜೆಡಿಎಸ್ ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿ ನಾಯಕ, ಬಿಜೆಪಿಯ ಟಿ.ಯಶವಂತ ಕುಮಾರ್ ಸೇರಿದಂತೆ ಮುದ್ರಾಲಯಗಳ ಮಾಲೀಕರು ಇದ್ದರು.

# ಡೆಂಗ್ಯೂ ನಿಯಂತ್ರಣ ಅರಿವು ಜನರಿಗಿರಲಿ

» ದಾವಣಗೆರೆ

ಡೆಂಗ್ಯೂ ನಿಯಂತ್ರಣದ ಬಗ್ಗೆ ಜನರಿಗೆ ಜಾಗೃತಿ ಇದ್ದಾಗ ರೋಗವನ್ನು ನಿಯಂತ್ರಣದಲ್ಲಿಡಲು ಸಾಧ್ಯವಾಗಲಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ ಹಾಗೂ ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಡೆಂಗ್ಯೂ ನಿಯಂತ್ರಣ ಕುರಿತ ಜಾಗೃತಿ ಜಾಥಾಕ್ಕೆ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿ ಮಾತನಾಡಿದರು.

ನಿಂತ ನೀರು ಸೊಳ್ಳೆಗಳ ತವರು, ಡೆಂಗಿ ಜ್ವರ ಈಡಿಸ್ ಎಂಬ ಸೊಳ್ಳೆಯಿಂದ ಹರಡುತ್ತದೆ, ನೀರಿನ ಸಂಗ್ರಹದ ಪರಿಕರಗಳನ್ನು ವಾರಕ್ಕೆ ಎರಡು ಬಾರಿ ಸ್ವಚ್ಚಗೊಳಿಸಿ, ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಿ, ನೀರಿನ ಪರಿಕರಗಳಲ್ಲಿನ ಬಾಲಹುಳುಗಳೇ ಸೊಳ್ಳೆ, ಇವುಗಳ ಉತ್ಪತ್ತಿಯನ್ನು ನಿಯಂತ್ರಣದಲ್ಲಿಟ್ಟು ಆರೋಗ್ಯ ಇಲಾಖೆಯೊಂದಿಗೆ ಕೈ ಜೋಡಿಸಿ ಡೆಂಗ್ಯೂ ಮಹಾಮಾರಿಯನ್ನು ಸೋಲಿಸಿ ಎಂದರು.



ಕಾರ್ಯಕ್ರಮದಲ್ಲಿ ಜಿಲ್ಲಾ ಮಲೇರಿಯಾ ಅಧಿಕಾರಿ ಡಾ. ಕೆ.ಎಚ್. ಗಂಗಾಧರ್, ದಾವಣಗೆರೆ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ದೇವರಾಜ್ ಪಟಾಗೆ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಅಧೀಕ್ಷಕರು ಡಾ.ಮಧು, ಡಾ. ಸುರೇಶ್ ಬಾರ್ಕಿ ಡಿಹೆಚ್ಓ, ಡಾ. ರೇಣುಕಾ ಆರಾಧ್ಯ ಆರ್ ಸಿ ಎಚ್ , ಡಾ. ರಾಘವನ್ ಡಿಎ□□ಓ, ಡಾ. ರುದ್ರಸ್ವಾಮಿ ಎ□□ಡಬ್ಲ್ಯೂಓ ಹಾಗೂ ಎಲ್ಲಾ ನಗರ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು ಸಿಬ್ಬಂದಿ ವರ್ಗದವರು ಮತ್ತು ಅಂಗನವಾಡಿ ಆಶಾ ಕಾರ್ಯಕರ್ತೆಯರು ಇನ್ನಿತರರು ಭಾಗವಹಿಸಿದ್ದರು.

## ಲೇವಾದೇವಿ ಹಾಗೂ ಗಿರವಿದಾರರಿಗೆ ಬಡ್ಡಿದರ ನಿಗಧಿ

» ಚಿತ್ರದುರ್ಗ

ಲೇವಾದೇವಿ ಗಿರವಿ ಹಾಗೂ ಹಣಕಾಸು ಸಂಸ್ಥೆಗಳು ಕರ್ನಾಟಕ ಲೇವಾದೇವಿಗಾರರ ಅಧಿನಿಯಮ 1961ರ ಪ್ರಕರಣ 28ರಡಿ ಸರ್ಕಾರವು ಬಡ್ಡಿದರ ನಿಗಧಿಪಡಿಸಿದೆ. ಈ ಕುರಿತು ಸಾರ್ವಜನಿಕರಿಗೆ ಹೆಚ್ಚಿನ ಅರಿವು ಮೂಡಿಸುವ ನಿಟ್ಟಿನಲ್ಲಿ ಲೈಸನ್ಸ್ ಪಡೆದ ಲೇವಾದೇವಿ ಹಾಗೂ ಗಿರವಿದಾರರ ಅಂಗಡಿಯಲ್ಲಿ, ಸಾರ್ವಜನಿಕರ ಹಿತದೃಷ್ಟಿಗೆ ಸುಲಭವಾಗಿ ಕಾಣುವಂತೆ ಬಡ್ಡಿದರ ವಿಧಿಸುವ ನಾಮಫಲಕಗಳನ್ನು ನಗದು ಕೌಂಟರ್ ಹತ್ತಿರ ದಪ್ಪ ಅಕ್ಷರಗಳಲ್ಲಿ ಮುದ್ರಿಸಿ ಪ್ರದರ್ಶಿಸಬೇಕು. ಲೇವಾದೇವಿ ಹಾಗೂ ಗಿರವಿದಾರರು ಭದ್ರತೆ ಇರುವ ಸಾಲಗಳಿಗೆ ಗರಿಷ್ಟ ವಾರ್ಷಿಕ ಶೇ.14 ಮತ್ತು ಭದ್ರತೆ ಇಲ್ಲದ ಸಾಲಗಳಿಗೆ ಗರಿಷ್ಠ ವಾರ್ಷಿಕ ಶೇ.16 ರಷ್ಟು ಮಾತ್ರ ಬಡ್ಡಿ ವಿಧಿಸಬೇಕು ಎಂದು ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರಮಿಕವರ್ಗದ ಸೇವೆಯನ್ನು ಪ್ರತಿಯೊಬ್ಬರೂ ಪ್ರಶಂಸಿಸಬೇಕು : ಅವರ ಬಗ್ಗೆ ಸಹಾನುಭೂತಿ ಅಗತ್ಯ



» ಚಳ್ಳಕೆರೆ

ಕಾರ್ಮಿಕ ದಿನಾಚರಣೆ ಹಿನ್ನೆಲೆಯಲ್ಲಿ ನಗರದ ಇನ್ನರ್‌ವ್ಹೀಲ್‌ಕ್ಲಬ್ ವತಿಯಿಂದ ಎಪಿಎಂಸಿ ಮತ್ತು ನಗರಸಭೆಯ ಪೌರಕಾರ್ಮಿಕರಿಗೆ ಉಪಹಾರ ವಿತರಿಸುವ ಮೂಲಕ ಕಾರ್ಮಿಕ ದಿನಾಚರಣೆಯನ್ನು ಸರಳವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಇನ್ನರ್‌ವ್ಹೀಲ್‌ಕ್ಲಬ್ ಅಧ್ಯಕ್ಷೆ ಮೀರಾರಮೇಶ್, ಪ್ರತಿವರ್ಷ ಇನ್ನರ್‌ವ್ಹೀಲ್‌ಕ್ಲಬ್ ವತಿಯಿಂದ ಪೌರಕಾರ್ಮಿಕರು ಹಾಗೂ ಎಪಿಎಂಸಿ ಕಾರ್ಮಿಕರಿಗೆ ಉಪಹಾರ ನೀಡುವ ಮೂಲಕ ಅವರಿಗೆ ಶುಭಹಾರೈಸಲಾಗುತ್ತದೆ. ಶ್ರಮಿಕವರ್ಗದ ಕೆಲಸವನ್ನು ನಾವೆಲ್ಲರೂ ಗೌರವಿಸಬೇಕು. ಹಗಲುರಾತ್ರಿ ಎನ್ನದೆ ಎಪಿಎಂಸಿ ಕಾರ್ಮಿಕರು ಮಾರುಕಟ್ಟೆಯಲ್ಲಿ ದುಡಿಯುತ್ತಾರೆ. ವಾಣಿಜ್ಯ ಕ್ಷೇತ್ರದಲ್ಲಿ ಇಲ್ಲಿನ ಮಾರುಕಟ್ಟೆ ತನ್ನದೇಯಾದ ವಿಶೇಷತೆಯನ್ನು ಹೊಂದಿದೆ. ನಗರಸಭೆಗೆ ಸಂಬಂಧಪಟ್ಟಂತೆ ಇತ್ತೀಚಿನ ದಿನಗಳಲ್ಲಿ ನಗರದ ವ್ಯಾಪ್ತಿ ಪ್ರದೇಶ ವಿಸ್ತಾರವಾಗಿದ್ದು, ಪೌರಕಾರ್ಮಿಕರು ಕಡಿಮೆ ಸಂಖ್ಯೆಯಲಿದ್ದರೂ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರ ನಿರಂತರ ಸ್ವಚ್ಚತೆಯ ಪರಿಶ್ರಮದಿಂದ ನಾವೆಲ್ಲರೂ ಆರೋಗ್ಯವಂತರಾಗಿದ್ದೇವೆಂದರು.

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಅಧ್ಯಕ್ಷ ಕೆ.ನಾಗೇಶ್, ಹಿರಿಯ ಸದಸ್ಯ ಜಯಪ್ರಕಾಶ್, ಡಾ.ಕೆ.ಎಂ.ಜಯಕುಮಾರ್, ಇನ್ನರ್‌ವ್ಹೀಲ್‌ಕ್ಲಬ್ ಕಾರ್ಯದರ್ಶಿ ಸುನಿತಾಬಸವರಾಜು, ಖಜಾಂಚಿ ಪದ್ಮನಾಗರಾಜು, ರಾಜೇಶ್ವರಿಶ್ರೀನಾಥ, ಜ್ಯೋತಿನಾಗರಾಜು, ಕಲ್ಪನಾಮಧು, ಕವಿತಾವಿಶುಕುಮರ್ ಮುಂತಾದವರು ಉಪಸ್ಥಿತರಿದ್ದರು.

# ಮನ್ನೇಕೋಟೆ ಗ್ರಾಮದ ನೂರಾರು ರೈತರಿಗೆ ಬಂಡಿಜಾಡು, ಕೋಡಿಹಳ್ಳಿ ಕೆರೆ ನೀರು ಹರಿಯುವ ಜಾಗಕ್ಕೆ ನಿರ್ಬಂಧ





» ಚಳ್ಳಕೆರೆ

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಒಡೆತನದ ತಳಕು ಹೋಬಳಿ ಮನ್ನೇಕೋಟೆ ಗ್ರಾಮದ ರಿ.ಸರ್ವೆ ನಂ.135ರಲ್ಲಿ ಕೋಡಿಹಳ್ಳಿ ಕೆರೆನೀರು ಸಾಗುವ ಕಾಲುವೆ ಹಾಗೂ ಬಂಡಿ ಜಾಡಿದ್ದು, ಈ ಭಾಗದ ನೂರಾರು ರೈತರು ಕಳೆದ ಸಾವಿರಾರುವರ್ಷಗಳಿಂದ ಇದನ್ನು ಸದುಪಯೋಗ ಪಡಿಸಿಕೊಳ್ಳುತ್ತಿದ್ದು, ಸದರಿ ಜಮೀನನ್ನು ಸಚಿವ ಡಿ.ಸುಧಾಕರ್ ಇನ್ಫೋಸಿಸ್‌ಗೆ ಗುತ್ತಿಗೆ ನೀಡಿದ್ದು ಅವರು ಬಂಡಿ ಜಾಡು ಹಾಗೂ ಕೋಡಿಹಳ್ಳಿ ಕೆರೆ ಕಾಲುವೆಯನ್ನು ಬಂದ್ ಮಾಡಿದ್ದರಿಂದ ರೈತರಿಗೆ ತೊಂದರೆಯಾಗಿದೆ ಎಂದಿನಂತೆ ರೈತರಿಗೆ ಬಂಡಿಜಾಡು ಹಾಗೂ ಕೆರೆ ನೀರು ಹರಿಯುವ ಕಾಲುವೆ ಬಿಡಿಸುವಂತೆ ಗ್ರಾಮಸ್ಥರು ತಹಶೀಲ್ದಾರ್‌ಗೆ ಮನವಿ ಮಾಡಿದ್ದಾರೆ.

ಮನ್ನೇಕೋಟೆ ಗ್ರಾಮದ ನೂರಾರು ರೈತರು ಶುಕ್ರವಾರ ಸದರಿ ಬಂಡಿಜಾಡು ಹಾಗೂ ಕೋಡಿಹಳ್ಳಿ ಕೆರೆ ನೀರು ಹರಿಯುವ ಜಾಗದಲ್ಲಿದ್ದು ವಿರೋಧ ವ್ಯಕ್ತಪಡಿಸಿದರಲ್ಲದೆ, ರೈತರ ಹಿತದೃಷ್ಠಿಯಿಂದ ಸಚಿವರು ಬಂಡಿಜಾಡು ಹಾಗೂ ಕೋಡಿಹಳ್ಳಿ ಕೆರೆ ನೀರು ಹರಿಯುವ ಕಾಲುವೆಯನ್ನು ರೈತರಿಗೆ ಬಿಟ್ಟುಕೊಡುವಂತೆ ಮನವಿ ಮಾಡಿದರು. ರೈತರೆಲ್ಲರೂ ಸೇರಿ ಈ ಕುರಿತು ಸರ್ಕಾರಕ್ಕೆ ಮನವಿ ಮಾಡಿಕೊಳ್ಳಬೇಕೆಂದು ತೀರ್ಮಾನಿಸಿದರು. ಮನ್ನೇಕೋಟೆ ಗ್ರಾಮದ ನೂರಾರು ರೈತರು ತಾಲ್ಲೂಕು ಕಚೇರಿಗೆ ಆಗಮಿಸಿ ತಹಶೀಲ್ದಾರ್ ರೇಹಾನ್‌ಪಾಷರವರಿಗೆ ಮನವಿ ನೀಡಿ, ತಾಲ್ಲೂಕು ಆಡಳಿತ ದಯಮಾಡಿ ತುರ್ತು ಗಮನಹರಿಸಿ ರೈತರಿಗೆ ಸಹಾಯ ಮಾಡುವಂತೆ ಮನವಿ ಮಾಡಿದರು. ಮನವಿ ಸ್ವೀಕರಿಸಿದ ತಹಶೀಲ್ದಾರ್ ರೇಹಾನ್‌ಪಾಷ ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ ಕಳಿಸಿಕೊಡುವ ಭರವಸೆ ನೀಡಿದರು.

ಗ್ರಾಮಸ್ಥರಾದ ಗೋವಿಂದಪ್ಪ, ಪಾಲಯ್ಯ, ನಾಗರಾಜು, ಈರಣ್ಣ, ಬಸವರಾಜು, ಹೊನ್ನೂರುಸ್ವಾಮಿ, ದೊಡ್ಡಬಸಯ್ಯ, ಚಂದ್ರಣ್ಣ, ಬಿ.ಬಸವರಾಜು, ಎಸ್.ತಿಪ್ಪೇಸ್ವಾಮಿ, ಸಣ್ಣಸಿದ್ದಯ್ಯ, ಶಾಂತಣ್ಣ, ಮಾರಣ್ಣ, ಸೋಮಶೇಖರ್, ಚಂದ್ರಶೇಖರ್ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ನೆನೆಗುದಿಗೆ ಬಿದಿದ್ದ ರಾಜಕಾಲುವೆ ಸ್ವಚ್ಚತಾ ಕಾರ್ಯ

» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಚಳ್ಳಕೆರೆ ನಗರದ ಮದ್ಯಭಾಗದಲ್ಲಿ ಹಾದುಹೋಗಿರುವ ರಾಜಕಾಲುವೆಯ ಎರಡೂ ಬದಿಯಲ್ಲೂ ಜಾಲಿ ಸೇರಿದಂತೆ ಅನೇಕ ಗಿಡಗಳು ಬೆಳೆದು ನೀರು ಸರಾಗವಾಗಿ ಹರಿಯಲು ತೊಂದರೆಯಾಗಿತ್ತಲ್ಲದೆ, ವಿಷಜಂತುಗಳಿಗೆ ಆಸರೆಯ ತಾಣವಾಗಿತ್ತು. ಸಾರ್ವಜನಿಕರ ಮನವಿಯಂತೆ ನಗರಸಭೆ ಪೌರಾಯುಕ್ತ ಜೀವನ್‌ಕಟ್ಟಿಮನಿ ರಾಜಕಾಲುವೆ ಎರಡೂ ಬದಿಯ ಗಿಡಗಳನ್ನು ತೆಗೆಸಿ ಸ್ವಚ್ಚತಾ ಕಾರ್ಯಕ್ಕೆ ಚಾಲನೆ ನೀಡಿದರು.

ನಗರದ ಬಳ್ಳಾರಿ ರಸ್ತೆ, ಕಾಟಪ್ಪನಹಟ್ಟಿ, ಗೊಲ್ಲರಹಟ್ಟಿ, ಪಾವಗಡ ರಸ್ತೆಯ ಮೂಲಕ



ರೈಲ್ವೆ ಸ್ಟೇಷನ್ ಮೂಲಕ ನಗರಂಗೆರೆ ಕೆರೆಗೆ ಸೇರ್ಪಡೆಯಾಗಲಿದೆ. ಈ ಬಗ್ಗೆ ಹಲವಾರು ಬಾರಿ ಮಳೆಗೂ ಮುನ್ನ ಸ್ವಚ್ಚತಾ ಕಾರ್ಯ ಕೈಗೊಳ್ಳುವಂತೆ ಸಾರ್ವಜನಿಕರು ತಾಕೀತು ಮಾಡಿದ್ದರು. ಈ ಹಿಂದೆ ಕ್ಷೇತ್ರ ಶಾಸಕ ಟಿ.ರಘುಮೂರ್ತಿಯವರು ಸಹ ರಾಜಕಾಲುವೆ ಸ್ವಚ್ಚತೆಯ ಬಗ್ಗೆ ಹಿಂದಿನ ಪೌರಾಯುಕ್ತರಿಗೆ ಸ್ಪಷ್ಟ ಸೂಚನೆ ನೀಡಿದ್ದರು.

ಈ ಎಲ್ಲಾ ಹಿನ್ನೆಲೆಯಲ್ಲಿ ಪೌರಾಯುಕ್ತ ಜೀವನ್‌ಕಟ್ಟಿಮನಿ ಬೆಳಗ್ಗೆಯಿಂದಲೇ ರಾಜಕಾಲುವೆ ಸ್ವಚ್ಚತಾ ಕಾರ್ಯವನ್ನು ಆರಂಭಿಸಿದರು. ಕಾಟಪ್ಪನಹಟ್ಟಿ ಗೊಲ್ಲರಹಟ್ಟಿ ಹಾಗೂ ಹೊಸಮನೆ ಬಡಾವಣೆ ಮೂಲಕ ಹಾದುಹೋಗಿರುವ ರಾಜಕಾಲುವೆಯ ಗಿಡಗಂಟೆಗಳನ್ನು ಜೆಸಿಬಿ ಮೂಲಕ ಕಿತ್ತುಹಾಕಿ ನೀರು ಸರಾಗವಾಗಿ ಹರಿಯುವ ವ್ಯವಸ್ಥೆ ಮಾಡಲಾಗದೆ. ನಗರಸಭೆಯ ಈ ಕಾರ್ಯಕ್ಕೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಸ್ವಚ್ಚತಾ ಕಾರ್ಯದಲ್ಲಿ ನೈರ್ಮಲ್ಯ ಇಂಜಿನಿಯರ್ ನರೇಂದ್ರಬಾಬು, ಸಹಾಯಕ ಕಾರ್ಯಪಾಲಕ ಅಭಿಯಂತರ ಕೆ.ವಿನಯ್, ಸಹಾಯಕ ಇಂಜಿನಿಯರ್ ಲೋಕೇಶ್, ಹಿರಿಯ ಆರೋಗ್ಯ ನಿರೀಕ್ಷಕ ಸುನೀಲ್‌ಕುಮಾರ್, ರುದ್ರಮುನಿ, ಗಣೇಶ್, ಗೀತಾಕುಮಾರಿ ಮುಂತಾದವರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ವಸತಿ ಶಾಲೆಗಳಲ್ಲಿ ಖಾಲಿ ಇರುವ ಸ್ಥಾನಗಳಿಗೆ ಅರ್ಜಿ

» ದಾವಣಗೆರೆ

ಸಮಾಜ ಕಲ್ಯಾಣ ಇಲಾಖೆ ದಾವಣಗೆರೆ ವ್ಯಾಪ್ತಿಯಡಿ ಬರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಬೆಂಗಳೂರು ಇದರ ಅಡಿಯಲ್ಲಿ ಒಟ್ಟು 22 ವಸತಿ ಶಾಲೆಗಳು ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಸತಿ ಶಾಲೆಗಳಲ್ಲಿ 2024-25ನೇ ಸಾಲಿಗೆ 7, 8 ಮತ್ತು 9ನೇ ತರಗತಿಗಳಲ್ಲಿ ಖಾಲಿಯಿರುವ ಸ್ಥಾನಗಳನ್ನು ಜಿಲ್ಲಾ ಹಂತದಲ್ಲಿ ಪ್ರವೇಶ ಪರೀಕ್ಷೆಯ ಮೂಲಕ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಖಾಲಿ ಇರುವ ಸ್ಥಾನಗಳ ವಿವರ ಇಂತಿವೆ: 7ನೇ ತರಗತಿಯಲ್ಲಿ ಪ.ಜಾತಿ ಹೆಣ್ಣು-1, 8ನೇ ತರಗತಿಯಲ್ಲಿ ಪ.ಜಾತಿ ಹೆಣ್ಣು-2. ಪ್ರವರ್ಗ-1 ರಲ್ಲಿ ಹೆಣ್ಣು-1, 2ಎ ರಲ್ಲಿ ಹೆಣ್ಣು-1, 3ಬಿ ಯಲ್ಲಿ ಗಂಡು-1 ಹಾಗೂ 9ನೇ ತರಗತಿಯಲ್ಲಿ ಪ.ಜಾತಿ ಹೆಣ್ಣು-1. ಪ.ವರ್ಗದಲ್ಲಿ ಹೆಣ್ಣು- 5 ಒಟ್ಟು 12 ಸ್ಥಾನಗಳು ಖಾಲಿಯಿರುತ್ತವೆ. ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಜಿಲ್ಲೆಯ ಯಾವುದೇ ಶಾಲೆಯಲ್ಲಿ ಸ್ಥಾನ ಲಭ್ಯವಿರುವುದಿಲ್ಲ. ಮೇಲ್ಕಾಣಿಸಿದ ಖಾಲಿ ಸ್ಥಾನಗಳನ್ನು ಹೊರತು ಪಡಿಸಿ ಇತರೆ (ಲಿಂಗ, ಜಾತಿ) ಆಸಕ್ತಿಯಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದಲ್ಲಿ, ವಸತಿ ಶಾಲೆಗಳಲ್ಲಿ ಮುಂದಿನ ದಿನಗಳಲ್ಲಿ ಖಾಲಿಯಾಗಬಹುದಾದ ಸ್ಥಾನಗಳಿಗೆ ಹೆಚ್ಚುವರಿ ಆಯ್ಕೆಪಟ್ಟ(ಫಚಿಟಿಣುಟಿರ ಖಣ) ಮೆರಿಟ್ ಮತ್ತು ಮೀಸಲಾತಿ ಆಧಾರದ ಮೇಲೆ ವಿದ್ಯಾರ್ಥಿಗಳನ್ನು ದಾಖಲಾತಿಗೆ ಪರಿಗಣಿಸಲಾಗುವುದು. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಮೇ.31 ರೊಳಗಾಗಿ ಜಂಟಿ ನಿರ್ದೇಶಕರ ಕಛೇರಿ ಸಮಾಜ ಕಲ್ಯಾಣ ಇಲಾಖೆ ದಾವಣಗೆರೆ ಇಲ್ಲಿ ಕಡ್ಡಾಯವಾಗಿ ಸಲ್ಲಿಸುವುದು. ಜೂನ್ 5ರಂದು ಮೊರಾರ್ಜಿದೇಸಾಯಿ ವಸತಿ ಶಾಲೆ ದೇವರಬೆಳಕೆರೆ ಹರಿಹರ ತಾಲ್ಲೂಕು ಇಲ್ಲಿ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುವುದು.

### ಕ್ರಿಶನ್ ಜಿಲ್ಲೆಗೆ ಭೇಟಿ

» ದಾವಣಗೆರೆ

ಪ್ರಧಾನ ಮಂತ್ರಿ ಸಡಕ್ ಯೋಜನೆ ಹಂತ-3ರಡಿಯಲ್ಲಿ ನಿರ್ಮಾಣ ಹಂತದಲ್ಲಿರುವ ಕಾಮಗಾರಿಗಳ ಪರಿವೀಕ್ಷಣೆಗಾಗಿ ಮೇ.21 ರಿಂದ 24 ರವರೆಗೆ ಪಂಜಾಬ್ ಚಂಡೀಗಡದ ರಾಷ್ಟ್ರೀಯ ಗುಣ ನಿಯಂತ್ರಣ ಮಾನಿಟರ್ ಕೇಂದ್ರದ ಕೆವಾಲ್ ಕ್ರಿಶನ್ ಗರ್ಗ್ ಇವರು ಜಿಲ್ಲೆಗೆ ಆಗಮಿಸಿ ಪರೀವಿಕ್ಷಣೆ ನಡೆಸಲಿದ್ದಾರೆ. ಸಾರ್ವಜನಿರು ಇವರನ್ನು ಮೇ 24 ರಂದು ಹೊಟೇಲ್ ಸಾಯಿ ಇಂಟರ್ ನ್ಯಾಷನ[illegible]ನಲ್ಲಿ ಸಂಪರ್ಕಿಸಬಹುದು ಮೊ.ಸಂ: 9872255100 ನ್ನು ಕರೆ ಮಾಡಬಹುದೆಂದು ಯೋಜನಾ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

# ಸೌಲಭ್ಯ ಕೊರತೆಯಾಗದಂತೆ ಎಚ್ಚರಿಕೆವಹಿಸಿ: ಎಸಿ

» ಚಳ್ಳಕೆರೆ



ಕಳೆದ ಕೆಲವು ತಿಂಗಳುಗಳಿಂದ ಮಳೆ ವೈಪಲ್ಯದಿಂದ ಚಳ್ಳಕೆರೆ ತಾಲ್ಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿದ್ದು, ಕುಡಿಯುವ ನೀರು ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಜನತೆಗೆ ತಲುಪಿಸುವ ಜೊತೆಗೆ ಸರ್ಕಾರದಿಂದ ಕೈಗೊಳ್ಳಲಾದ ಕ್ರಮಗಳ ಬಗ್ಗೆ ಚರ್ಚಿಸಲು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಅಧ್ಯಕ್ಷತೆಯಲ್ಲಿ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಟಾಸ್ಕ್‌ಪೋರ್ಸ್ ಸಮಿತಿ ಸಭೆ ನಡೆಸಲಾಯಿತು.

ಸಭೆಯಲ್ಲಿ ತಾಲ್ಲೂಕಿನ ಎಲ್ಲಾ ಹೋಬಳಿ ಕೇಂದ್ರದ ಕಂದಾಯಾಧಿಕಾರಿಗಳು, ಗ್ರಾಮ ಲೆಕ್ಕಾಧಿಗಕು, ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದು, ಗ್ರಾಮೀಣ ಭಾಗಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ಈಗಾಗಲೇ ಹಲವಾರು ದೂರುಗಳು ಬಂದಿವೆ. ಯಾವುದೇ ಗ್ರಾಮೀಣ ಪ್ರದೇಶದಲ್ಲಾಗಲಿ ಕುಡಿಯುವ ನೀರು ಸಿಗದೇ ಇದ್ದ ಸಂದರ್ಭದಲ್ಲಿ ಸರ್ಕಾರದಿಂದ ಹೆಚ್ಚುವರಿಯಾಗಿ ಬೋರ್‌ಕೊರೆಸಬೇಕು,

ಇಲ್ಲವಾದಲ್ಲಿ ಖಾಸಗಿ ಬೋರ್‌ಗಳಲ್ಲಿ ನೀರು ಲಭ್ಯವಿದ್ದರೆ ಅವರೊಡನೆ ಮಾತನಾಡಿ ನಿಗದಿತ ಶುಲ್ಕ ನೀಡಿ ನೀರು ಪಡೆದು ಸಾರ್ವಜನಿಕರಿಗೆ ಒದಗಿಸಬೇಕು.

ಗ್ರಾಮೀಣ ಭಾಗಗಳ ಗೋಶಾಲೆಗಳಲ್ಲಿ ಇರುವ ದೇವರ ಎತ್ತುಗಳು ಸೇರಿದಂತೆ ಎಲ್ಲಾ ಜಾನುವಾರುಗಳಿಗೆ ಕುಡಿಯುವ ನೀರು, ಮೇವು ಒದಗಿಸಬೇಕು. ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿದ್ದಲ್ಲಿ ಅವುಗಳಿಂದ ಜಿಪಿಎಸ್ ಪೋಟೋ ಕಡ್ಡಾಯವಾಗಿ ಒದಗಿಸಬೇಕು, ಯಾವುದೇ ಕೆಲಸ ಕಾರ್ಯ ಮಾಡಿದರೂ ಅವುಗಳ ಬಗ್ಗೆ ಕ್ಷಿಪ್ರಗತಿಯಲ್ಲಿ ಮಾಹಿತಿ ನೀಡಬೇಕು ಒಟ್ಟಿನಲ್ಲಿ ಗ್ರಾಮೀಣ ಭಾಗದ ಜನರು ಸರ್ಕಾರದಿಂದ ಯಾವುದೇ ಸೌಲಭ್ಯವಿಲ್ಲವೆಂದು ಕೊರಗುವಂತಾಗಬಾರದು ಎಂದರು.

ತಾಲ್ಲೂಕು ನೋಡಲ್ ಅಧಿಕಾರಿ ಹಾಗೂ ಎಡಿಎಲ್‌ಆರ್ ರಾಮಾಂಜನೇಯ ಮಾತನಾಡಿ, ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಜನರ ಸಂಕಷ್ಟಗಳಿಗೆ ನೆರವಾಗಲು ಅಧಿಕಾರಿವರ್ಗಕ್ಕೆ ಸಾಧ್ಯವಾಗಿಲ್ಲ. ಆದರೆ, ಚುನಾವಣೆ ಮುಗಿದಿದ್ದು, ಕೂಡಲೇ ಸರ್ಕಾರದ ಅಧಿಕಾರಿಗಳು ಗ್ರಾಮೀಣ ಜನರ ಸಮಸ್ಯೆಯತ್ತ ಗಮನಹರಿಸಬೇಕು ಎಂದರು. ತಾಲ್ಲೂಕಿನಾದ್ಯಂತ ಖಾಲಿ ಇರುವ ಶಿಕ್ಷಕ ಹುದ್ದೆ ಹಾಗೂ ಕಟ್ಟಡಗಳ ಶಿಥಿಲತೆಯ ಬಗ್ಗೆ ಸಂಬಂಧಪಟ್ಟ ಮುಖ್ಯೋಪಾಧ್ಯಾಯರೊಂದಿಗೆ ಚರ್ಚೆ ನಡೆಸಿ ವರದಿ ನೀಡುವಂತೆ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಇಒ ಬಿ.ಎಸ್.ಲಕ್ಷ್ಮಣ್, ಕ್ಷೇತ್ರಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಪಶುವೈದ್ಯಾಧಿಕಾರಿ ಡಾ.ರೇವಣ್ಣ, ಗ್ರಾಮೀಣ ಕುಡಿಯುವ ನೀರು ವಿಭಾಗದ ಎಇಇ ದಯಾನಂದ, ಶಿರಸ್ತೇದಾರ್ ಸದಾಶಿವಪ್ಪ, ಕಂದಾಯಾಧಿಕಾರಿ ಲಿಂಗೇಗೌಡ, ರಾಜೇಶ್, ಮಂಜುನಾಥ ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.

### ರಘು ದೀಕ್ಷಿತ್ ಅವರಿಗೆ "ಕರ್ನಾಟಕ ನವ್ಯ ಸಂಗೀತ ಸಾಮ್ರಾಟ್" ಬಿರುದು ಪ್ರದಾನ

# ಕರ್ನಾಟಕ ಸಂಘ ಕತಾರ್‌ನಿಂದ ವಾರ್ಷಿಕ ಸಂಭ್ರಮ

» ನಾಗತಿಹಳ್ಳಿಮಂಜುನಾಥ್



ದೋಹಾ: ಕತಾರ್ ರಾಜ್ಯದ ದೋಹಾ ಮೂಲದ ಸಮುದಾಯವಾದ ಕರ್ನಾಟಕ ಸಂಘ ಕತಾರ್ ತನ್ನ ರಚನೆಯ 25 ನೇ ವರ್ಷವನ್ನು ಪ್ರವೇಶಿಸಿದೆ, ಈ ವರ್ಷಾಚರಣೆಯ ಪ್ರಥಮ ಕಾರ್ಯಕ್ರಮ "ವಸಂತೋತ್ಸವ - 2024" ಅನ್ನು ತುಂಬಿದ ಸಭಾಂಗಣದಲ್ಲಿ ಭವ್ಯ ಶೈಲಿಯಲ್ಲಿ ಹಮ್ಮಿಕೊಂಡಿತ್ತು. "ದಿ ರಘು ದೀಕ್ಷಿತ್ ಪ್ರಾಜೆಕ್ಟ್" ಬ್ಯಾನರ್ ಅಡಿಯಲ್ಲಿ ಆಯೋಜಿಸಲಾದ ಕಾನ್ಸರ್ಟ್ ಮಾದರಿಯ ಕಾರ್ಯಕ್ರಮವು ನೆರೆದಿದ್ದ ಪ್ರೇಕ್ಷಕರನ್ನು ಕುಣಿಯುವಂತೆ ಮಾಡಿತು. ಕನ್ನಡದ ಪ್ರಸಿದ್ಧ ಸ್ಟ್ಯಾಂಡ್-ಅಪ್ ಹಾಸ್ಯನಟ ರಾಘವೇಂದ್ರ ಆಚಾರ್ ಅವರ ಸ್ಟ್ಯಾಂಡ್-ಅಪ್ ಕಾಮಿಡಿ ಕಾರ್ಯಕ್ರಮಕ್ಕೆ ಉತ್ತಮ ಚಾಲನೆ ನೀಡಿತು. ವೀಕ್ಷಕರು ಹಾಸ್ಯ ಮತ್ತು ರಾಕ್ ಸಂಗೀತ ಕಾರ್ಯಕ್ರಮದ ಹಬ್ಬಕ್ಕೆ ಸಾಕ್ಷಿಯಾದರು.

ಕತಾರ್ ರಾಷ್ಟ್ರದ ಭಾರತದ ರಾಯಭಾರಿ ಗೌರವಾನ್ವಿತ ಶ್ರೀ ವಿಪುಲ್ ಅವರು ಕಾರ್ಯಕ್ರಮದ ಮುಖ್ಯ ಅತಿಥಿಯಾಗಿದ್ದರು. ಭಾರತೀಯ ಸಾಂಸ್ಕೃತಿಕ ಕೇಂದ್ರದ ಉಪಾಧ್ಯಕ್ಷರು ಸುಬ್ರಮಣ್ಯ ಹೆಬ್ಬಾಗೆಲು, ಕರ್ನಾಟಕ ಸಂಘದ ಕತಾರ್ ಮಾಜಿ ಅಧ್ಯಕ್ಷರು ಅರವಿಂದ ಪಾಟೀಲ್ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಇತರ ಅಪೆಕ್ಸ್ ಸಂಸ್ಥೆಗಳ ಅಧ್ಯಕ್ಷರು ಮತ್ತು ಕರ್ನಾಟಕ ಸಂಘ ಕತಾರ್ ನಿರ್ವಹಣಾ ಸಮಿತಿಯ ಸದಸ್ಯರು ಮತ್ತು ಸಲಹಾ ಮಂಡಳಿಯ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಮಹೇಶ್ ಗೌಡ ಮಾತನಾಡಿ, ಸಂಘದ ಯಶಸ್ಸಿಗೆ ಸಹಕರಿಸಿದ ಹಿಂದಿನ ಅಧ್ಯಕ್ಷರು ಮತ್ತು ಸಮಿತಿ ಸದಸ್ಯರಿಗೆ ಧನ್ಯವಾದ ಅರ್ಪಿಸಿದ ಅವರು, 2024 ಕರ್ನಾಟಕ ಸಂಘ ಕತಾರ್ ಗೆ ರಜತ ಮಹೋತ್ಸವ ವರ್ಷವಾಗಿದ್ದು, ಈ ವರ್ಷ ಇನ್ನೂ ಅನೇಕ ಕಾರ್ಯಕ್ರಮಗಳನ್ನು ಯೋಜಿಸಲಾಗಿದೆ ಎಂದು ಸಭೆಗೆ ತಿಳಿಸದರು. ಗೌರವಾನ್ವಿತ ವಿಪುಲ್ ಅವರು ಸಭಿಕರನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ ಈ ಕಾರ್ಯಕ್ರಮವನ್ನು ಬೆಂಬಲಿಸಿದ ಎಲ್ಲಾ ಸಮುದಾಯದ ಸದಸ್ಯರಿಗೆ ಧನ್ಯವಾದ ಅರ್ಪಿಸಿದರು ಮತ್ತು ಕರ್ನಾಟಕ ಸಂಘ ಕತಾರ್ ನ ಸಾಂಸ್ಕೃತಿಕ, ದಯಾಪರ ಚಟುವಟಿಕೆಗಳನ್ನು ಬೆಂಬಲಿಸುವುದಾಗಿ ತಿಳಿಸಿ. ಮಹೇಶ್ ಗೌಡ ಅವರು ಕತಾರ್ ಕರ್ನಾಟಕ ಸಂಘದ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಅದ್ಭುತ ಕಾರ್ಯಕ್ರಮಗಳನ್ನು ಆಯೋಜಿಸಿದ್ದಕ್ಕಾಗಿ ಅವರ ನಾಯಕತ್ವವನ್ನು ಶ್ಲಾಘಿಸಿದರು. ಕಾರ್ಯಕ್ರಮದ ಪ್ರಮುಖ ಅಂಶವೆಂದರೆ ರಘು ದೀಕ್ಷಿತ್ ಮತ್ತು ಅವರ ತಂಡದ ರಾಕಿಂಗ್ ಪ್ರದರ್ಶನ, ಅವರು ತಮ್ಮ ಪ್ರದರ್ಶನದಿಂದ ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸುವುದಲ್ಲದೆ, ತಮ್ಮ ರೋಮಾಂಚಕ ಪ್ರದರ್ಶನದಿಂದ ಅವರನ್ನು ನೃತ್ಯ ವೇದಿಕೆಗೆ ಕರೆತಂದರು, ಭಾಗವಹಿಸಿದ ಅನೇಕರು ಭಾವಪರವಶರಾದರು, ಇದು ಅವರು ನೋಡಿದ ಅತ್ಯುತ್ತಮ ಪ್ರದರ್ಶನ ಎಂದು ತಿಳಿಸಿದರು.

### ವಿಶ್ವ ಜೇನು ದಿನಾಚರಣೆ

» ಚಿತ್ರದುರ್ಗ

ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆ ಹಾಗೂ ಚಿತ್ರದುರ್ಗದ ಕೃಷಿ ತಂತ್ರಜ್ಞರ ಸಂಸ್ಥೆ ಪ್ರಾದೇಶಿಕ ಘಟಕ ವತಿಯಿಂದ ಇದೇ ಮೇ.20ರಂದು ಸೋಮವಾರ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ರವರೆಗೆ ಹಿರಿಯೂರಿನ ಅಕ್ಷಯ ಫುಡ್ ಪಾರ್ಕ್ ರಸ್ತೆಯಲ್ಲಿನ ಶ್ರೀನಿವಾಸ್ ಅವರ ಜೇನು ಕೃಷಿ ತೋಟದಲ್ಲಿ ವಿಶ್ವ ಜೇನು ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕಾರ್ಯಕ್ರಮ ಉದ್ಘಾಟಿಸುವರು. ನಿವೃತ್ತ ಕೃಷಿ ನಿರ್ದೇಶಕಿ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷೆ ಸಿ.ಎನ್.ನಂದಿನಿಕುಮಾರಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆ ಉಪಾಧ್ಯಕ್ಷ ಎಂ.ಮಹಂತೇಶಪ್ಪ, ಕಾರ್ಯದರ್ಶಿ ವೀರಣ್ಣ ಕೆ.ಕಮತರ, ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್, ಕೃಷಿ ತಂತ್ರಜ್ಞರ ಸಂಸ್ಥೆ ಚಿತ್ರದುರ್ಗ ಪ್ರಾದೇಶಿಕ ಘಟಕದ ಅಧ್ಯಕ್ಷ ಜಿ.ಸಿ.ರಂಗಸ್ವಾಮಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಸವಿತಾ, ಟಿ.ರಾಜಣ್ಣ, ಕಟ್ಟಾ ಶ್ರೀನಿವಾಸ ರೆಡ್ಡಿ ಭಾಗವಹಿಸುವರು.






ಅನ್ನಭಾಗ್ಯದ ಹಸಿದ ಹೊಟ್ಟೆಯವರ ಅಕ್ಕಿ ಕದಿಯುವ ಕಳ್ಳರು ನಾವು ಕಳ್ಳರು....

ಕೊರೋನಾ ಕಷ್ಟದ ಸಮಯದಲ್ಲಿ ವೆಂಟಿಲೇಟರ್ ಖರೀದಿಯಲ್ಲಿ ದುಡ್ಡು ಹೊಡೆಯುವ ನೀಚರು ನಾವು ನೀಚರು.....

ಬುದ್ಧಿಮಾಂದ್ಯ ಬೀದಿ ಹೆಣ್ಣಿನ ಅತ್ಯಾಚಾರ ಮಾಡುವ ಕೀಚಕರು ನಾವು ಕೀಚಕರು......

ವೃದ್ಧಾಪ್ಯದ ಪಿಂಚಣಿಯಲ್ಲಿ ಕಮೀಷನ್ ಹೊಡೆಯುವ ಕಿರಾತಕರು ನಾವು ಕಿರಾತಕರು......

ಡೆತ್ ಸರ್ಟಿಫಿಕೇಟ್ ನೀಡಲೂ ಲಂಚ ಪಡೆಯುವ ಭ್ರಷ್ಟರು ನಾವು ಭ್ರಷ್ಟರು......

ಗಂಡ ಹೆಂಡತಿಯ ಸ್ವಾರ್ಥಕ್ಕಾಗಿ ಹೆತ್ತವರನ್ನು ವೃದ್ಧಾಶ್ರಮಕ್ಕೆ ಸೇರಿಸುವ ಕೊಳಕರು ನಾವು ಕೊಳಕರು......

ಹಣಕ್ಕಾಗಿ ಮನುಷ್ಯನ ಕಿಡ್ನಿಯನ್ನೇ ಕದಿಯುವ ಕಟುಕರು ನಾವು ಕಟುಕರು......

ಮೂರು ವರ್ಷದ ಹಸುಳೆಯ ಮೇಲೆ ಲೈಂಗಿಕ ದೌರ್ಜನ್ಯ ಮಾಡುವ ರಾಕ್ಷಸರು ನಾವು ರಾಕ್ಷಸರು......

ವೇಶ್ಯೆಯರ ಬಳಿಯೂ ಹಣ ಕೀಳುವ ತಲೆಹಿಡುಕರು ನಾವು ತಲೆಹಿಡುಕರು......

ಎಳೆಯ ಮಕ್ಕಳನ್ನು ದುಡಿಸಿಕೊಳ್ಳುವ ದುಷ್ಟರು ನಾವು ದುಷ್ಟರು.......

ಬೆಕ್ಕಿನ ಚಲನೆಯನ್ನು ಹುಲಿ ಎಂದು ಬ್ರೇಕಿಂಗ್ ನ್ಯೂಸ್ ಮಾಡುವ ಪ್ರಚಂಡರು ನಾವು ಪ್ರಚಂಡರು..... ರಸ್ತೆಯಲ್ಲಿ ಮಕ್ಕಳನ್ನು ಕೊಚ್ಚಿಕೊಂದ ನಾಯಿಗಳಿದ್ದರೂ ಸಮಸ್ಯೆ ಪರಿಹರಿಸದ ಮತಿಹೀನರು ನಾವು ಮತಿಹೀನರು...... ತಿನ್ನುವ ಆಹಾರ ಕಲಬೆರಕೆ ಮಾಡುವ ಮುಠ್ಠಾಳರು ನಾವು ಮುಠ್ಠಾಳರು....... ಕೃಷಿಭೂಮಿಯನ್ನು 30×40 ಸೈಟ್ ಮಾಡಿ ಮಾರಿಕೊಂಡು



ಹಣ ಉಡಾಯಿಸಿದ ಪಾಪಿಗಳು ನಾವು ಪಾಪಿಗಳು.......

ಸಂಸಾರದ ಸಹಜ ಗಲಾಟೆಯನ್ನು ಸುದ್ದಿಮಾಡಿ ಕಾಸು ಮಾಡುವ ದಗಾಕೋರರು ನಾವು ದಗಾಕೋರರು.......

ಆತ್ಮಹತ್ಯೆಯಿಂದ ಸತ್ತ ರೈತನ ಹೆಣದ ಮುಂದೆ ರಾಜಕೀಯ ಮಾಡುವ ವಿಕೃತರು ನಾವು ವಿಕೃತರು......

ಕಾಡನ್ನು ಕಡಿದು ಶೋಕಿಗಾಗಿ ರೆಸಾರ್ಟ ನಿರ್ಮಿಸುವ ಖದೀಮರು ನಾವು ಖದೀಮರು.......

ಹುಲಿ ಚರ್ಮದ ಮೇಲೆ ಕುಳಿತು ವೇದ ಮಂತ್ರ ಪಠಿಸುವ ಅನಾಗರಿಕರು ನಾವು ಅನಾಗರಿಕರು....

ಕೈ ತೋರಿಸಿ ಭವಿಷ್ಯ ಕೇಳುವ ಶತಮೂರ್ಖರು ನಾವು ಶತಮೂರ್ಖರಿ.....

ದೇವರ ವಿಗ್ರಹವನ್ನು ಮುಟ್ಟಲೂ ಮೈಲಿಗೆ ಎನ್ನುವ ಮೂಢರು ನಾವು ಮೂಢರು.......

ಆಸ್ಪತ್ರೆಗಿಂತ ಮಸೀದಿ ಮಂದಿರ ಚರ್ಚುಗಳನ್ನೇ ಭವ್ಯವಾಗಿ ನಿರ್ಮಿಸಿ ಅನಾರೋಗ್ಯವಾದಾಗ ಕೊಳಕು ಆಸ್ಪತ್ರೆಗೆ ಧಾವಿಸುವ ಆತ್ಮವಂಚಕರು ನಾವು ಆತ್ಮವಂಚಕರು.......

ಗ್ರಂಥಾಲಯಗಳನ್ನು ಪಾಳು ಮಂಟಪಗಳಾಗಿಸಿ ಬಾರುಗಳನ್ನು ಲವಲವಿಕೆಯಿಂದ ಇರುವಂತೆ ನೋಡಿಕೊಂಡಿರುವ ಬುದ್ದಿವಂತರು ನಾವು ಬುದ್ದಿವಂತರು......

ಸಿಗರೇಟು ಕ್ಯಾನ್ಸರ್ ಗೆ ಕಾರಣ ಎಂದು ಪಾಕೆಟ್ ಮೇಲೆ ಬರೆದುಕೊಡು ಅಂಗಡಿಗಳಲ್ಲಿ ಮಾರುವ ದನದಾಹಿಗಳು ನಾವು ದನದಾಹಿಗಳು.....

ಅಭಿವ್ಯಕ್ತಿ ಸ್ವಾತಂತ್ರ್ಯ ಇದೆ ಎನ್ನುತ್ತಾ ಸತ್ಯ ಹೇಳುವವನ್ನು ಹಿಂಸಿಸುವ ಮನೋ ವಿಕೃತರು ನಾವು ಮನೋ ವಿಕೃತರು.......

ವಾಸ್ತವ ಜಗತ್ತಿಗಿಂತ ಭ್ರಮಾ ಲೋಕವೇ ಅಪ್ಯಾಯಮಾನ ಎಂದು ಅರ್ಥಮಾಡಿಕೊಂಡ ಮೂರ್ಖರು ನಾವು ಮೂರ್ಖರು.....

ಅಸಮಾನತೆ, ಮೌಢ್ಯತೆಯನ್ನು ನಮ್ಮ ಸಂಸ್ಕೃತಿ ಎಂದು ಹೆಮ್ಮೆ ಪಡುವ ಮನೋ ವೈಕಲ್ಯದವರು ನಾವು ಮನೋ ವೈಕಲ್ಯದವರು...... ಇದು ಉದಾಹರಣೆಗಳು ಮಾತ್ರ. ಸಹಜತೆ ಇನ್ನೂ ಭಯಂಕರವಾಗಿದೆ.

ಒಂದು ವೇಳೆ ಈ ಸಮಾಜ ಇದಕ್ಕಿಂತ ಉತ್ತಮವಾಗಿದೆ ಎಂಬ ಅಭಿಪ್ರಾಯ ನಿಮ್ಮದಾದರೆ ತುಂಬಾ ಸಂತೋಷ. ಅದನ್ನು ಗೌರವಿಸುತ್ತೇನೆ. ನಿಮ್ಮ ಅದೃಷ್ಟಕ್ಕೆ ಅಭಿನಂದನೆಗಳು. ಈ ಲೇಖನ ನಿಮಗೆ ಅನ್ವಯಿಸುವುದಿಲ್ಲ.

ನಾನು ಕಂಡ ನನ್ನ ಅನುಭವಗಳನ್ನು ಮಾತ್ರ ಇಲ್ಲಿ ಹೇಳಲಾಗಿದೆ. ಒಳ್ಳೆಯವರ ಸುದ್ದಿ ನನಗೆ ಬೇಡ. ಅವರಿಂದ ಸಮಾಜಕ್ಕೆ ಯಾವುದೇ ತೊಂದರೆ ಇಲ್ಲ. ಕೆಟ್ಟವರ ಬಗ್ಗೆ ಮಾತ್ರ ನನ್ನ ಚಿಂತೆ. ಏಕೆಂದರೆ ನಾನು ಸಹ ಕೆಟ್ಟವನು ಮತ್ತು ಕೆಟ್ಟ ಸಮಾಜದಲ್ಲಿ ಜೀವಿಸುತ್ತಿದ್ದೇನೆ...........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ



▪ ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ಖಾಲಿ ಸ್ಥಾನಗಳಿಗೆ ಅರ್ಜಿ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯಲ್ಲಿನ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಡಿಬರುವಕರ್ನಾಟಕವಸತಿಶಿಕ್ಷಣಸಂಸ್ಥೆನಡೆಸುವ ಒಟ್ಟು 22 ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ವಸತಿ ಶಾಲೆಗಳಲ್ಲಿ 2024–25ನೇ ಸಾಲಿಗೆ 7, 8 ಮತ್ತು 9ನೇ ತರಗತಿಗಳಲ್ಲಿ ಖಾಲಿಯಿರುವ ಸ್ಥಾನಗಳನ್ನು ಜಿಲ್ಲಾ ಹಂತದಲ್ಲಿ ಪ್ರವೇಶ ಪರೀಕ್ಷೆಯ ಮೂಲಕ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. 7ನೇ ತರಗತಿಯಲ್ಲಿ ಪ.ಜಾತಿ ಹೆಣ್ಣು–1, 8 ನೇ ತರಗತಿಯಲ್ಲಿ ಪ.ಜಾತಿ ಹೆಣ್ಣು–2. ಪ್ರವರ್ಗ–1 ರಲ್ಲಿ ಹೆಣ್ಣು–1, 2ಎ ರಲ್ಲಿ ಹೆಣ್ಣು–1, 3ಬಿ ಯಲ್ಲಿ ಗಂಡು–1 ಹಾಗೂ 9ನೇ ತರಗತಿಯಲ್ಲಿ ಪ.ಜಾತಿ ಹೆಣ್ಣು–1. ಪ.ವರ್ಗದಲ್ಲಿ ಹೆಣ್ಣು– 5 ಒಟ್ಟು 12 ಸ್ಥಾನಗಳು ಖಾಲಿಯಿರುತ್ತವೆ. ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಜಿಲ್ಲೆಯ ಯಾವುದೇ ಶಾಲೆಯಲ್ಲಿ ಸ್ಥಾನ ಲಭ್ಯವಿರುವುದಿಲ್ಲ. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಮೇ.31 ರೊಳಗಾಗಿ ಜಂಟಿ ನಿರ್ದೇಶಕರ ಕಚೇರಿ ಸಮಾಜ ಕಲ್ಯಾಣ ಇಲಾಖೆ, ದಾವಣಗೆರೆ ಇಲ್ಲಿ ಕಡ್ಡಾಯವಾಗಿ ಸಲ್ಲಿಸುವುದು. ಜೂನ್ 5ರಂದು ಮೊರಾರ್ಜಿದೇಸಾಯಿ ವಸತಿ ಶಾಲೆ ದೇವರಬೆಳಕೆರೆ, ಹರಿಹರ ತಾಲ್ಲೂಕು ಇಲ್ಲಿ ಪ್ರವೇಶ ಪರೀಕ್ಷೆ ನಡೆಸಲಾಗುವುದು.

# ತೊಗಲು ಗೊಂಬೆ ಆಟ ಜಾನಪದ ಕಲೆಯ ಮೌಲ್ಯ ಸಂರಕ್ಷಿಸಿದೆ

» **ಚಳ್ಳಕೆರೆ**

ಆಧುನಿಕತೆ ಹೆಸರಿನಲ್ಲಿ ನೇಪಥ್ಯಕ್ಕೆ ಸರಿಯುತ್ತಿರುವ ಜಾನಪದ ಕಲೆಗಳಿಗೆ ಮರುಜೀವ ತುಂಬ ಕೆಲಸ ಆಗಬೇಕಿದೆ. ಇಂದಿನ ಯುವಪೀಳಿಗೆ ಜಾನಪದ ಕಲೆ ಉಳಿಸುವತ್ತ ಮುಂದಾಗಬೇಕೆಂದು ರೈತ ಮುಖಂಡ ಕೆ.ಪಿ.ಭೂತಯ್ಯ ಹೇಳಿದರು.

ಅವರು ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮದ ಆಂಜನೇಯಸ್ವಾಮಿ ದೇವಸ್ಥಾನದ ಬಳಿಯ ರಂಗಮಂದಿರ ಆವರಣದಲ್ಲಿ ನಡೆದ ರಾವಣನ ವಧೆ ತೊಗಲುಗೊಂಬೆ ಆಟಕ್ಕೆ ಚಾಲನೆ ನೀಡಿ ಮಾತನಾಡಿದರು. ತಂತ್ರಜ್ಞಾನ ಬೆಳೆದಂತೆ ಹಲವಾರು ಕಲೆಗಳು ನಮ್ಮಿಂದ ದೂರವಾಗುತ್ತಿವೆ. ನಮ್ಮ ಗ್ರಾಮದಲ್ಲಿ ವಾಸವಿರುವ ಕಿಳ್ಳೆಕ್ಯಾತ, ಸಿಳ್ಳೆಕ್ಯಾತ ಸಮುದಾಯ ಈ ಕಲೆಯನ್ನು ಇಂದಿಗೂ ಉಳಿಸಿಕೊಂಡು ಬಂದಿದ್ದಾರೆ. ಗ್ರಾಮಕ್ಕೆ ಪ್ರಾಕೃತಿಕ ಸಮಸ್ಯೆಗಳು ಉಂಟಾದರೆ ಈ





ನಾಟಕದ ಮೂಲಕ ಅವುಗಳಿಗೆ ಪರಿಹಾರ ಕಂಡುಕೊಳ್ಳುವ ಪರಿ ನಡೆದು ಬಂದಿದೆ. ಅದರಂತೆ ಮಳೆ, ಬೆಳೆಗಾಗಿ ಪ್ರಾರ್ಥಿಸಿ ರಾವಣನ ವಧೆ ತೊಗಲುಗೊಂಬೆ ನಾಟಕ ಪ್ರದರ್ಶನ ಮಾಡಿದ್ದಾರೆ.

ಒಂದು ಕಾಲದಲ್ಲಿ ತೊಗಲು ಗೊಂಬೆಯಾಟ ಸಿನಿಮಾದಷ್ಟೇ ಆಕರ್ಷಣೆ ಹೊಂದಿದ್ದ ಜಾನಪದ ಕಲೆಯಾಗಿತ್ತು. ಗ್ರಾಮಗಳಲ್ಲಿ ನಡೆಯುವ ಹಬ್ಬಹರಿದಿನ, ಬರಗಾಲದ ಸಂದರ್ಭದಲ್ಲಿ ಈ ಮನೋರಂಜನೆ ನಡೆಯುತ್ತಿತ್ತು. ಇದಕ್ಕೆ ಪ್ರತಿಯಾಗಿ ಗ್ರಾಮಸ್ಥರಿಂದ ದವಸ, ಧಾನ್ಯ, ಬಟ್ಟೆ, ಕುರಿ ನೀಡಿಕಲೆಗೆ ಪ್ರೋತ್ಸಾಹ ನೀಡುತ್ತಿದ್ದರು. ಆದರೆ, ಮೊಬೈಲ್, ಟಿವಿ ಧಾರವಾಹಿಗಳ ಭರಾಟೆಗೆ ಇವುಗಳೆಲ್ಲಾ ಮೂಲೆ ಸೇರುತ್ತಿವೆ. ತೊಗಲು ಗೊಂಬೆಯಾಟ ಮಹತ್ವ ಕಳೆದುಕೊಂಡು ಕಲಾವಿದರು ಬೀದಿಗೆ ಬಿದ್ದರು ಅವರಿಗೆ ಪುನಶ್ಚೇತನ ನೀಡುವ ಕಾರ್ಯ ಆಗಬೇಕಿದೆ.

ಕಲಾವಿದರಾದ ಸಿಳ್ಳೆಕ್ಯಾತರತಿಪ್ಪೇಸ್ವಾಮಿ ಮಾತನಾಡಿ, ತೊಗಲು ಗೊಂಬೆ ಆಧುನಿಕ ಕಾಲಘಟ್ಟದಲ್ಲಿ ನಸಿಶಿಹೋಗುತ್ತಿದೆ. ಕಲಾವಿದರಿಗೂ ನೆಲೆಇಲ್ಲದೆ ಇತರೆ ಕೆಲಸಗಳತ್ತ ಮುಖ ಮಾಡಿದ್ದಾರೆ. ನಮ್ಮ ಗ್ರಾಮದಲ್ಲಿ ಇಂದಿಗೂ ಸಹ ಇಡೀ ದಿನ ಈ ನಾಟಕ ನಡೆಯುತ್ತದೆ. ಸಂಪ್ರದಾಯದಂತೆ ನಾಟಕ ಮುಗಿಸಿ ಗ್ರಾಮ ದೇವರಾದ ಆಂಜನೇಯಸ್ವಾಮಿಗೆ ಪೂಜೆ ಸಲ್ಲಿಸುವ ವಾಡಿಕೆ ಇಂದಿಗೂ ನಡೆದು ಬಂದಿದೆ ಎಂದರು.ಕಲಾವಿದರಾದ ಯನ್ನಪ್ಪ, ರಾಮದಾಸ್, ಸುಜ್ಜಲಕ್ಷ್ಮಿಮ್ಮ, ಡಿ.ಆರ್ ತಿಮ್ಮಣ್ಣ, ಡಿ.ಒ.ಪಾಲಯ್ಯ, ಕಾಲುವೇಹಳ್ಳಿ ಶ್ರೀನಿವಾಸ್, ಲಿಂಗದಹಳ್ಳಿಪಾಲಯ್ಯ, ಜಾಜೂರುಹನುಮಂತಪ್ಪ, ಬಸವರಾಜಪ್ಪ ಮುಂತಾದವರು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T